ಸಂಪುಟ: 11 ಸಂಚಿಕೆ: 150 ಪುಟ: 4+2 ಬೆಲೆ : 3.00 ಶುಕ್ರವಾರ ಜುಲೈ 17, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 11 Issue : 150 Pages : 4+2 Rate : 3.00 Friday July 17, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

ಶೇ.32.04 ಮಳೆ ಕೊರತೆ | ಬೆಳೆ ಉಳಿವಿಗೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ | ರೈತರಿಗೆ ಧೈರ್ಯ ತುಂಬಿದ ಡಿಸಿ ಶ್ರೀಧರ್

# ಒಣಗುತ್ತಿರುವ ಬೆಳೆಗಳ ಪರಿಶೀಲಿಸಿದ ಡಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಬೆಳೆಗಳು ಬಾಡುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಗುರುವಾರ ಗದಗ ಹಾಗೂ ರೋಣ ತಾಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ರೈತರ ಹೊಲಗಳಲ್ಲೇ ಬೆಳೆಗಳ ಸ್ಥಿತಿಗತಿ ಪರಿಶೀಲಿಸಿದರು. ರೈತರೊಂದಿಗೆ ನೇರವಾಗಿ ಸಂವಾದ ನಡೆಸಿದ ಅವರು, ಆತಂಕ ಪಡಬಾರದು ಎಂದು ಧೈರ್ಯ ತುಂಬಿದರೆ, ಕೃಷಿ ಇಲಾಖೆ ಅಧಿಕಾರಿಗಳಿಗೆ ನಿರಂತರ ಬೆಳೆ ಮೇಲ್ವಿಚಾರಣೆ ನಡೆಸುವಂತೆ ಸೂಚನೆ ನೀಡಿದರು.

ಗದಗ ತಾಲೂಕಿನ ದುಂದೂರ ಕ್ರಾಸ್, ಗಂಗಿಮಡಿಹಿರೇಹಂದಿಗೋಳ ರಸ್ತೆ, ಹರ್ಲಾಪೂರ ಹಾಗೂ ಕೋಟುಮುಚಗಿ ಗ್ರಾಮಗಳಲ್ಲಿ ಹೆಸರು, ಉದ್ದು, ಶೇಂಗಾ, ಮೆಕ್ಕೆಜೋಳ ಮತ್ತು ಹತ್ತಿ ಬೆಳೆಗಳ ಬೆಳವಣಿಗೆಯನ್ನು ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ಬಳಿಕ ರೋಣ ತಾಲೂಕಿನ ನರೇಗಲ್ ಗ್ರಾಮದಲ್ಲಿ ಮಳೆ ಕೊರತೆಯಿಂದ ಒಣಗುತ್ತಿರುವ ಬೆಳೆಗಳನ್ನು ವೀಕ್ಷಿಸಿದರು.

ಹೊಲಗಳಲ್ಲೇ ರೈತರ ಸಮಸ್ಯೆ ಆಲಿಸಿದ ಜಿಲ್ಲಾಧಿಕಾರಿಗಳು, ಮಳೆ ಕೊರತೆಯಿಂದ ಉಂಟಾಗುತ್ತಿರುವ ಹಾನಿಯನ್ನು ದಾಖಲಿಸಿ ರೈತರಿಗೆ ತಕ್ಷಣ ತಾಂತ್ರಿಕ ಸಲಹೆ ಹಾಗೂ ಅಗತ್ಯ ನೆರವು ಒದಗಿಸುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಹವಾಮಾನ ವೈಪರೀತ್ಯ, ಕೀಟ ಹಾಗೂ ರೋಗಬಾಧೆ ಕಂಡುಬಂದರೆ ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.



ಕೃಷಿ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ಮಾಹಿತಿ ನೀಡಿ, ಜಿಲ್ಲೆಯಲ್ಲಿ 3,13,719 ಹೆಕ್ಟೇರ್ ಬಿತ್ತನೆ ಗುರಿಯಲ್ಲಿ ಇದುವರೆಗೆ 2,57,401 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಜೂನ್ 1ರಿಂದ ಜುಲೈ 16ರವರೆಗೆ 121.4 ಮಿ.ಮೀ. ವಾಡಿಕೆ ಮಳೆಯ ಬದಲಿಗೆ ಕೇವಲ 82.50 ಮಿ.ಮೀ. ಮಳೆಯಾಗಿದ್ದು, ಶೇ.32.04ರಷ್ಟು ಮಳೆ ಕೊರತೆ ದಾಖಲಾಗಿದೆ ಎಂದು ತಿಳಿಸಿದರು.

> ರೈತರು ಯಾವುದೇ ರೀತಿಯ ಸಂಕಷ್ಟಕ್ಕೆ ಸಿಲುಕದಂತೆ ಅಧಿಕಾರಿಗಳು ನಿರಂತರವಾಗಿ ಹೊಲಗಳಿಗೆ ಭೇಟಿ ನೀಡಿ ಬೆಳೆಗಳ ಸ್ಥಿತಿಗತಿ ಪರಿಶೀಲಿಸಬೇಕು. ರೈತರಿಗೆ ಅಗತ್ಯ ತಾಂತ್ರಿಕ ಸಲಹೆ, ಇಲಾಖೆಯ ಸೌಲಭ್ಯ ಹಾಗೂ ಮಾರ್ಗದರ್ಶನವನ್ನು ಸಮಯಕ್ಕೆ ತಲುಪಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ.
>
> – **ಸಿ.ಎನ್. ಶ್ರೀಧರ್**, ಜಿಲ್ಲಾಧಿಕಾರಿ, ಗದಗ

### ಜುಲೈ 22ರವರೆಗೆ ಬೆಳೆ ವಿಮೆ ನೋಂದಣಿ ಅವಕಾಶ

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಅಡಿಯಲ್ಲಿ ಹೆಸರು ಹಾಗೂ ಹತ್ತಿ ಬೆಳೆಗಳಿಗೆ ಜುಲೈ 22ರವರೆಗೆ ಬೆಳೆ ವಿಮೆ ನೋಂದಾಯಿಸಿಕೊಳ್ಳಲು ಅವಕಾಶವಿದೆ. ಅರ್ಹ ರೈತರು ಈ ಸೌಲಭ್ಯದ ಸದುಪಯೋಗ ಪಡೆಯುವಂತೆ ಜಿಲ್ಲಾಧಿಕಾರಿ ಮನವಿ ಮಾಡಿದರು.

## ಎಸ್‌ಐಆರ್: 2.33 ಲಕ್ಷಕ್ಕೂ ಅಧಿಕ ಫಾರ್ಮ್ ವಿತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)-2026ರ ಅಂಗವಾಗಿ ಗದಗ ವಿಧಾನಸಭಾ ಕ್ಷೇತ್ರದಲ್ಲಿ ಬಿ.ಎಲ್.ಓಗಳು ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್ ವಿತರಿಸುವ ಕಾರ್ಯ ಚುರುಕುಗೊಂಡಿದೆ.

ಕ್ಷೇತ್ರದಲ್ಲಿ ಒಟ್ಟು 2,33,829 ಮತದಾರರು ಹಾಗೂ 226 ಮತಗಟ್ಟೆಗಳಿದ್ದು, ಜುಲೈ 15ರವರೆಗೆ 2,33,822 ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿದೆ. ಅಲ್ಲದೆ 1,01,239 ಫಾರ್ಮಗಳ ಡಿಜಿಟಲೀಕರಣ ಪೂರ್ಣಗೊಂಡಿದೆ. ಬಿ.ಎಲ್.ಓಗಳು ಆಗಸ್ಟ್ 8ರವರೆಗೆ ಮನೆ ಮನೆಗೆ ಭೇಟಿ ನೀಡಿ ಫಾರ್ಮ ವಿತರಣೆ ಹಾಗೂ ಸಂಗ್ರಹ ಕಾರ್ಯ ಮುಂದುವರಿಸಲಿದ್ದು, ಮತದಾರರು ಅಗತ್ಯ ಮಾಹಿತಿ ನೀಡಿ ಸಹಕರಿಸುವಂತೆ ಗದಗ ಉಪವಿಭಾಗಾಧಿಕಾರಿ ಹಾಗೂ ಮತದಾರರ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಧಾರವಾಡ ಜಿಲ್ಲೆಯಲ್ಲಿ ಶೇ.96.31 ಗಣತಿ ನಮೂನೆಗಳ ವಿತರಣೆ

**ವಿಜಯಸಾಕ್ಷಿ ಸುದ್ದಿ, ಧಾರವಾಡ**


ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ-2026ರ ಅಂಗವಾಗಿ ಧಾರವಾಡ ಜಿಲ್ಲೆಯಲ್ಲಿ ಜುಲೈ 16ರವರೆಗೆ 15,62,042 ಗಣತಿ (ಉಣ್ಣಿಇಭ್ಟಿಚಠಿಜಿಟ್ಟ) ನಮೂನೆಗಳನ್ನು ವಿತರಿಸಲಾಗಿದ್ದು, ಇದು ಒಟ್ಟು ಮತದಾರರ ಶೇ.96.31ಕ್ಕೆ ಸಮನಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸ್ನೇಹಲ್ ಆರ್. ತಿಳಿಸಿದ್ದಾರೆ.

ಜಿಲ್ಲೆಯ 16,21,961 ಮತದಾರರ ಪೈಕಿ ಇದುವರೆಗೆ 6,68,373 ನಮೂನೆಗಳು (ಶೇ.41.21) ಗಣಕೀಕರಣಗೊಂಡಿವೆ. ಅಲ್ಲದೆ 84,641 ಮತದಾರರನ್ನು ಗೈರು, ಸ್ಥಳಾಂತರ, ಮರಣ ಹಾಗೂ ದ್ವಿಪ್ರತಿ ಪ್ರಕರಣಗಳಡಿ ಗುರುತಿಸಲಾಗಿದೆ.

ನವಲಗುಂದ ಹಾಗೂ ಕುಂದಗೋಳ ವಿಧಾನಸಭಾ ಕ್ಷೇತ್ರಗಳಲ್ಲಿ ಶೇ.100ರಷ್ಟು ಗಣತಿ ನಮೂನೆಗಳ ವಿತರಣೆ ಪೂರ್ಣಗೊಂಡಿದೆ.

ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ-ಮನೆಗೆ ಭೇಟಿ ನೀಡುವ ಸಂದರ್ಭದಲ್ಲಿ ಮತದಾರರು ಭರ್ತಿ ಮಾಡಿದ ಗಣತಿ ನಮೂನೆಗಳನ್ನು ನೀಡಿ ಸಹಕರಿಸುವಂತೆ ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ.

## ಜೈಲಿಗೆ ಕರೆದೊಯ್ಯುವಾಗಲೇ ಆರೋಪಿ ಎಸ್ಕೇಪ್! ಅರಣ್ಯ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿ ಪರಾರಿಯಾದ ಖೈದಿ



**ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ**

ನ್ಯಾಯಾಂಗ ಬಂಧನಕ್ಕೊಳಗಾದ ಆರೋಪಿಯೊಬ್ಬ ಜೈಲಿಗೆ ಸಾಗಿಸುತ್ತಿದ್ದ ವೇಳೆ ಅರಣ್ಯ ಇಲಾಖೆ ಸಿಬ್ಬಂದಿ ಮೇಲೆ ಹಲ್ಲೆ ಮಾಡಿ ಪರಾರಿಯಾದ ಘಟನೆ ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನಲ್ಲಿ ನಡೆದಿದೆ. ಕಲಬುರಗಿ ಕೇಂದ್ರ ಕಾರಾಗೃಹದಿಂದ ಖೈದಿಗಳ ಪರಾರಿಯ ಪ್ರಕರಣದ ಬೆನ್ನಲ್ಲೇ ಈ ಘಟನೆ ಭದ್ರತಾ ವ್ಯವಸ್ಥೆಯ ಕುರಿತು ಪ್ರಶ್ನೆ ಎಬ್ಬಿಸಿದೆ.

ಪರಾರಿಯಾದ ಆರೋಪಿಯನ್ನು ಹೊಸನಗರ ತಾಲೂಕಿನ ಅಡುಗೋಡಿ ಗ್ರಾಮದ ವೆಂಕಟೇಶ್ (36) ಎಂದು ಗುರುತಿಸಲಾಗಿದೆ. 2019-20ರಲ್ಲಿ ಅರಣ್ಯ ವೀಕ್ಷಕ ಅಯಾನ್ ಬೆಡೆಭಾಯಿ ಹಾಗೂ ಕಳ್ಳಬೇಟೆ ತಡೆ ಶಿಬಿರದ ಸಿಬ್ಬಂದಿ ಚಕ್ರಪಾಣಿ ಅವರ ಮೇಲೆ ಹಲ್ಲೆ ನಡೆಸಿ ಕರ್ತವ್ಯಕ್ಕೆ ಅಡ್ಡಿಪಡಿಸಿದ ಪ್ರಕರಣದಲ್ಲಿ ಬಂಧಿಸಲಾಗಿತ್ತು.

ನ್ಯಾಯಾಲಯ ಆರೋಪಿಗೆ ನ್ಯಾಯಾಂಗ ಬಂಧನ ವಿಧಿಸಿದ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಶಿವಮೊಗ್ಗ ಕೇಂದ್ರ ಕಾರಾಗೃಹಕ್ಕೆ ಕರೆದುಕೊಂಡು ಹೋಗುತ್ತಿದ್ದರು. ಹೊಸನಗರದ ಬಟ್ಟೆಮಲ್ಲಪ್ಪ ಸರ್ಕಲ್ ಬಳಿ ತಲುಪಿದಾಗ ಹಸಿವಾಗಿದೆ ಎಂದು ಊಟ ಕೇಳಿದ ಆರೋಪಿ, ಸಿಬ್ಬಂದಿಯ ಗಮನ ಬೇರೆಡೆ ಸೆಳೆದಿದ್ದಾನೆ.

ಡಿಆರ್‌ಎಫ್‌ಒ ಸುನೀಲ್ ಡಿ. ಕುಂಬಾರ್ ಹಾಗೂ ಸಿಬ್ಬಂದಿ ಇಬ್ರಾಹಿಂ ಊಟ ತರಲು ತೆರಳಿದ ವೇಳೆ, ಜೀಪ್‌ನಲ್ಲಿದ್ದ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿ ವೆಂಕಟೇಶ್ ಪರಾರಿಯಾಗಿದ್ದಾನೆ.

ಘಟನೆಯ ಮಾಹಿತಿ ದೊರೆಯುತ್ತಿದ್ದಂತೆಯೇ ಅರಣ್ಯ ಇಲಾಖೆ ಹಾಗೂ ಪೊಲೀಸ್ ಇಲಾಖೆ ಜಂಟಿಯಾಗಿ ಬಟ್ಟೆಮಲ್ಲಪ್ಪ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ತೀವ್ರ ಶೋಧ ಕಾರ್ಯಾಚರಣೆ ಆರಂಭಿಸಿವೆ. ಹೊಸನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಯನ್ನು ಶೀಘ್ರ ಬಂಧಿಸಲು ವಿಶೇಷ ತಂಡಗಳನ್ನು ನಿಯೋಜಿಸಲಾಗಿದೆ.

ನೀಟ್ ಅಕ್ರಮ, ಪ್ರಜಾಪ್ರಭುತ್ವ ಮತ್ತು ಪರಿಸರ ಸಂರಕ್ಷಣೆ ವಿಚಾರವಾಗಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ

## ಸೋನಮ್ ವಾಂಗ್ಚುಕ್ ಹೋರಾಟಕ್ಕೆ ಬೆಂಬಲ



**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳ ಹಿತಾಸಕ್ತಿ, ಪರಿಸರ ಸಂರಕ್ಷಣೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ರಕ್ಷಣೆಗೆ ಹೋರಾಟ ನಡೆಸುತ್ತಿರುವ ಪರಿಸರವಾದಿ ಸೋನಮ್ ವಾಂಗ್ಚುಕ್ ಅವರಿಗೆ ಬೆಂಬಲ ಸೂಚಿಸಿ, ಗುರುವಾರ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಟಿಸಮಾನತೆಗಾಗಿ ನಾವುಟಿ ಸಂಘಟನೆಯ ವತಿಯಿಂದ ಧರಣಿ ಸತ್ಯಾಗ್ರಹ ನಡೆಸಲಾಯಿತು.

ಸತ್ಯಾಗ್ರಹವನ್ನು ಉದ್ದೇಶಿಸಿ ಮಾತನಾಡಿದ ಸಾಮಾಜಿಕ ಕಾರ್ಯಕರ್ತ ಎಸ್.ಆರ್. ಹಿರೇಮಠ, ದೇಶದ ಸ್ವಾತಂತ್ರ್ಯ, ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ಉಳಿಸಿಕೊಳ್ಳಲು ನಾಗರಿಕರು ಹೋರಾಟದ ಹಾದಿ ಹಿಡಿಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಹಿರಿಯ ಸಾಹಿತಿ ಬಸವರಾಜ ಸೂಳಿಬಾವಿ ಮಾತನಾಡಿ, ಜನಪರ ಹೋರಾಟಗಾರರನ್ನು ದೇಶದ್ರೋಹಿಗಳೆಂದು ಬಿಂಬಿಸುವ ಪ್ರವೃತ್ತಿ ಪ್ರಜಾಪ್ರಭುತ್ವಕ್ಕೆ ಅಪಾಯಕಾರಿ ಎಂದು ಆರೋಪಿಸಿದರು.

ಮಾಜಿ ಶಾಸಕ ಮೋಹನ ಲಿಂಬಿಕಾಯಿ ಮಾತನಾಡಿ, ಅಂತರರಾಷ್ಟ್ರೀಯ ಖ್ಯಾತಿಯ ಸೋನಮ್ ವಾಂಗ್ಚುಕ್ ಅವರ ಹೋರಾಟವನ್ನು ಕಡೆಗಣಿಸುವ ಮೂಲಕ ಕೇಂದ್ರ ಸರ್ಕಾರ ದೇಶದ ಗೌರವಕ್ಕೆ ಧಕ್ಕೆ ತಂದಿದೆ ಎಂದು ಟೀಕಿಸಿದರು. ನೀಟ್ ಪರೀಕ್ಷೆ ಅಕ್ರಮ ಹಾಗೂ ವಿದ್ಯಾರ್ಥಿಗಳ ಸಮಸ್ಯೆಗಳ ಕುರಿತು ಕೇಂದ್ರ ಸರ್ಕಾರದ ಮೌನ ಖಂಡನೀಯ ಎಂದರು.

ಧರಣಿಯಲ್ಲಿ ಅಶೋಕ ಬರಗುಂಡಿ, ಶೇಕಣ್ಣ ಕವಳಿಕಾಯಿ, ಯುವ ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ಆಮ್ ಆದ್ಮಿ ಪಾರ್ಟಿಯ ಜಿಲ್ಲಾಧ್ಯಕ್ಷ ದಾದಾಪೀರ ಕಲೆಗಾರ, ಶರೀಫ್ ಬಿಳೆಯಲಿ, ಮುತ್ತು ಬಿಳೆಯಲಿ ಸೇರಿದಂತೆ ಪ್ರಗತಿಪರ ಚಿಂತಕರು ಹಾಗೂ ನೂರಾರು ಯುವಕರು ಭಾಗವಹಿಸಿದ್ದರು.

> ಸತ್ಯ, ಅಹಿಂಸೆ ಮತ್ತು ನ್ಯಾಯದ ತಳಹದಿಯ ಹೋರಾಟಗಳನ್ನು ಸರ್ಕಾರ ಗೌರವಿಸಬೇಕು. ನೀಟ್ ಪರೀಕ್ಷೆ ಅಕ್ರಮದ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು.
>
> – **ಎಸ್.ಆರ್. ಹಿರೇಮಠ,** ಸಾಮಾಜಿಕ ಕಾರ್ಯಕರ್ತ

ರೈತರ ಜಮೀನು ಕಬಳಿಕೆ ಯತ್ನ, ಕಾನೂನು ಸುವ್ಯವಸ್ಥೆ ವೈಫಲ್ಯ ಆರೋಪ | ಇಂದು ಬಿಜೆಪಿ ಬೃಹತ್ ಪ್ರತಿಭಟನೆ

## ಬಿಡದಿ ಭೂಸ್ವಾಧೀನ ವಿವಾದ; ಸಿಎಂ ವಿರುದ್ಧ ತೀವ್ರ ವಾಗ್ದಾಳಿ



**ವಿಜಯಸಾಕ್ಷಿ ಸುದ್ದಿ, ಗದಗ**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಹುದ್ದೆಯ ಘನತೆಗೆ ತಕ್ಕಂತೆ ನಡೆದುಕೊಳ್ಳದೆ, ರಿಯಲ್ ಎಸ್ಟೇಟ್ ಏಜೆಂಟ್‌ನಂತೆ ವರ್ತಿಸುತ್ತಿದ್ದಾರೆ. ಬಿಡದಿಯಲ್ಲಿ ರೈತರ ಜಮೀನುಗಳನ್ನು ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳುವ ಮೂಲಕ ತಮ್ಮ ಹಿತಾಸಕ್ತಿಯನ್ನು ಕಾಪಾಡಿಕೊಳ್ಳಲು ಮುಂದಾಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ತೀವ್ರ ವಾಗ್ದಾಳಿ ನಡೆಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರು ಸ್ವಯಂಪ್ರೇರಣೆಯಿಂದ ಭೂಮಿ ನೀಡಿದರೆ ಮಾತ್ರ ಭೂಸ್ವಾಧೀನ ಮಾಡಬೇಕು. ಆದರೆ, ಬಿಡದಿಯಲ್ಲಿ ರಾತ್ರಿ ವೇಳೆ ಗೂಂಡಾಗಳನ್ನು ರೈತರ ಮನೆಗಳಿಗೆ ಕಳುಹಿಸಿ ಬೆದರಿಕೆ ಹಾಕಲಾಗುತ್ತಿದೆ ಎಂದು ಆರೋಪಿಸಿದರು.

ಕನಕಪುರದಲ್ಲಿ ಎರಡನೇ ವಿಮಾನ ನಿಲ್ದಾಣ ನಿರ್ಮಾಣದ ಪ್ರಸ್ತಾಪವೂ ರಿಯಲ್ ಎಸ್ಟೇಟ್ ಲಾಬಿಯ ಭಾಗವಾಗಿದೆ. ತುಮಕೂರು ಅಥವಾ ಮಧ್ಯ ಕರ್ನಾಟಕ ಭಾಗದಲ್ಲಿ ವಿಮಾನ ನಿಲ್ದಾಣ ನಿರ್ಮಿಸಿದರೆ ರಾಜ್ಯದ ಬಹುತೇಕ ಜನರಿಗೆ ಅನುಕೂಲವಾಗಲಿದೆ. ಆದರೆ, ತಮ್ಮ ರಾಜಕೀಯ ಹಾಗೂ ವೈಯಕ್ತಿಕ ಹಿತಾಸಕ್ತಿಗಾಗಿ ಕನಕಪುರವನ್ನು ಆಯ್ಕೆ ಮಾಡಲಾಗುತ್ತಿದೆ ಎಂದು ಟೀಕಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಹಿಂದೂಗಳ ಮೇಲಿನ ದೌರ್ಜನ್ಯ, ಕೊಲೆ ಹಾಗೂ ಅಲ್ಪಸಂಖ್ಯಾತರ ಓಲೈಕೆ ರಾಜಕಾರಣ ಮಿತಿಮೀರಿದೆ ಎಂದು ಆರೋಪಿಸಿದ ಅವರು, ಹಾವೇರಿ, ರಟ್ಟಿಹಳ್ಳಿ, ಯಲ್ಲಾಪುರ ಹಾಗೂ ಕೊಪ್ಪಳದ ಘಟನೆಗಳನ್ನು ಉಲ್ಲೇಖಿಸಿ ಸರ್ಕಾರ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಹೇಳಿದರು.

ಎಸ್‌ಐಆರ್ (ವಿಶೇಷ ಸಮಗ್ರ ಪರಿಷ್ಕರಣೆ) ಕಾರ್ಯವನ್ನು ಬಿಜೆಪಿ ಸವಾಲಾಗಿ ಸ್ವೀಕರಿಸಿದ್ದು, ರಾಜ್ಯದ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ಕಾರ್ಯಕರ್ತರು ಮನೆಮನೆಗೆ ತೆರಳಿ ಕೆಲಸ ಮಾಡುತ್ತಿದ್ದಾರೆ. ಇದೇ ವೇಳೆ ಅಕ್ರಮ ವಲಸಿಗರಿಗೆ ಪಿಆರ್‌ಸಿ ನೀಡುತ್ತಿರುವುದು ಖಂಡನೀಯ ಎಂದು ಹೇಳಿದರು.

ರಾಜ್ಯದಲ್ಲಿ ಭೀಕರ ಮಳೆ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದರೂ ಕೃಷಿ ಸಚಿವರೇ ಇಲ್ಲದಿರುವುದು ಸರ್ಕಾರದ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ. ಪ್ರಧಾನಿಗೆ ಪತ್ರ ಬರೆದು ರಾಜಕೀಯ ಮಾಡುವ ಬದಲು ರೈತರಿಗೆ ತಕ್ಷಣ ಪರಿಹಾರ ಒದಗಿಸಬೇಕು ಎಂದು ಆಗ್ರಹಿಸಿದರು.

ರಾಜ್ಯ ಸರ್ಕಾರದ ಜನವಿರೋಧಿ ಆಡಳಿತ, ರೈತ ವಿರೋಧಿ ನೀತಿ ಹಾಗೂ ಕಾನೂನು ಸುವ್ಯವಸ್ಥೆ ವೈಫಲ್ಯ ಖಂಡಿಸಿ ಜುಲೈ 17ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬಿಜೆಪಿ ವತಿಯಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ವಿಜಯೇಂದ್ರ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಮುಖಂಡರಾದ ಶರಣು ತಳ್ಳಿಕೇರಿ, ಲಿಂಗರಾಜ ಪಾಟೀಲ, ಫಕ್ಕಿರೇಶ ರಟ್ಟಿಹಳ್ಳಿ, ಎಂ.ಎಸ್. ಕರಿಗೌಡ್ರ, ಎಂ.ಎಂ. ಹಿರೇಮಠ, ಭೀಮಸಿಂಗ್ ರಾಠೋಡ್, ಉಷಾ ದಾಸರ, ಸ್ವಾತಿ ಅಕ್ಕಿ, ನಿರ್ಮಲಾ ಕೊಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಗದಗ ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಭೀಕರ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದೆ. ಬಿತ್ತನೆ ಮಾಡಿದರೂ ಮೊಳಕೆ ಬರುತ್ತಿಲ್ಲ. ರೈತರ ರಕ್ಷಣೆಗೆ ಸರ್ಕಾರ ತಕ್ಷಣ ಧಾವಿಸಬೇಕು. ಪ್ರಧಾನಿಗೆ ಪತ್ರ ಬರೆದು ಕೈಕಟ್ಟಿ ಕುಳಿತರೆ ರೈತರ ಕಣ್ಣೀರು ಒರೆಸಲು ಸಾಧ್ಯವಿಲ್ಲ.
>
> – **ಬಿ.ವೈ. ವಿಜಯೇಂದ್ರ,** ರಾಜ್ಯಾಧ್ಯಕ್ಷ, ಬಿಜೆಪಿ

ಮನೆ ಮನೆಗೆ ಭೇಟಿ ನೀಡಿ ದಾಖಲೆ ಪರಿಶೀಲನೆ; ಅಗತ್ಯ ದಾಖಲೆ ನೀಡಿ ಸಹಕರಿಸುವಂತೆ ಪರಶುರಾಮ್ ಹೆಗ್ಡಳ್ ಮನವಿ

## ಗೃಹಜ್ಯೋತಿ ಫಲಾನುಭವಿಗಳಿಗೆ ಮರು ಪರಿಶೀಲನೆ ಕಡ್ಡಾಯ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ದಾಖಲಾತಿ ಮರು ಪರಿಶೀಲನೆ ಕಾರ್ಯ ತಾಲೂಕಿನ ಪಿಂಜಾರ್ ಹೆಗ್ಡಳ್ ಗ್ರಾಮದಲ್ಲಿ ಆರಂಭಗೊಂಡಿದ್ದು, ಫಲಾನುಭವಿಗಳು ಅಗತ್ಯ ದಾಖಲೆಗಳನ್ನು ಒದಗಿಸಿ ಅಧಿಕಾರಿಗಳಿಗೆ ಸಹಕರಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಪರಶುರಾಮ್ ಹೆಗ್ಡಳ್ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಜ್ಯೋತಿ ಯೋಜನೆಯು ಕಳೆದ ಮೂರು ವರ್ಷ ಗಳಿಂದ ಯಶಸ್ವಿಯಾಗಿ ಜಾರಿಯಲ್ಲಿದ್ದು, ಅರ್ಹ ಫಲಾನು ಭವಿಗಳಿಗೆ ಮುಂದೆಯೂ ಯೋಜನೆಯ ಸೌಲಭ್ಯ ನಿರಂತರವಾಗಿ ದೊರೆಯಬೇಕೆಂಬುದು ಸರ್ಕಾರದ ಆಶಯವಾಗಿದೆ ಎಂದು ಹೇಳಿದರು. ಅನಧಿಕೃತ ವಿದ್ಯುತ್ ಬಳಕೆಗೆ ಕಡಿವಾಣ ಹಾಕುವ ಉದ್ದೇಶದಿಂದ ಸರ್ಕಾರ ರಾಜ್ಯಾದ್ಯಂತ ಫಲಾನುಭವಿಗಳ ದಾಖಲಾತಿ ಮರು ಪರಿಶೀಲನೆ ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ಕೆಇಬಿ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ದಾಖಲೆಗಳನ್ನು ಪರಿಶೀಲಿಸಿ ಸಂಗ್ರಹಿಸಲಿದ್ದಾರೆ ಎಂದು ತಿಳಿಸಿದರು.

ಫಲಾನುಭವಿಗಳು ಆಧಾರ್ ಕಾರ್ಡ, ಮತದಾರರ ಗುರುತಿನ ಚೀಟಿ, ಇತ್ತೀಚಿನ ವಿದ್ಯುತ್ ಬಿಲ್, ಭಾವಚಿತ್ರ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಿದ್ಧವಾಗಿಟ್ಟುಕೊಂಡು ಅಧಿಕಾರಿಗಳಿಗೆ ನೀಡುವ ಮೂಲಕ ಪರಿಶೀಲನಾ ಕಾರ್ಯಕ್ಕೆ ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಉಪನಾಯಕನಹಳ್ಳಿ ಶಾಖಾಧಿಕಾರಿ ಶ್ರೀನಿವಾಸ್, ಲೈನ್‌ಮ್ಯಾನ್ ವಿನಾಯಕ, ಮೆಕ್ಯಾನಿಕ್ ಪ್ರವೀಣ್, ಗ್ರಾಮ ಪ್ರಮುಖರಾದ ರವಿಯಪ್ಪ ರೆಡ್ಡಿ, ಕೆ. ಪರಮೇಶ್, ಕೇಶವರಾಯನಬಂಡಿ ದುರುಗಪ್ಪ, ಅಂಗಡಿ ಮಂಜಪ್ಪ, ಸೋಮು ಜಂಗ್ಲಿ, ಬಡಿಗೇರ್ ವಿನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಅರ್ಹ ಫಲಾನುಭವಿಗಳಿಗೆ ಗೃಹಜ್ಯೋತಿ ಯೋಜನೆಯ ಸೌಲಭ್ಯ ನಿರಂತರವಾಗಿ ದೊರೆಯಬೇಕು. ಆದ್ದರಿಂದ ದಾಖಲಾತಿ ಮರು ಪರಿಶೀಲನೆಗೆ ಸಾರ್ವಜನಿಕರು ಅಗತ್ಯ ದಾಖಲೆಗಳನ್ನು ನೀಡಿ ಅಧಿಕಾರಿಗಳಿಗೆ ಸಹಕರಿಸಬೇಕು.
>
> – **ಪರಶುರಾಮ್ ಹೆಗ್ಡಳ್,** ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ

## ಸಿಂಡಿಕೇಟ್ ಸದಸ್ಯ ಡಿ.ಕೆ. ಹೊನ್ನಪ್ಪನವರಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ ಸರ್ಕಾರದ ನಾಮನಿರ್ದೇಶಿತ ಸದಸ್ಯರಾಗಿ ನೇಮಕಗೊಂಡಿರುವ ಧ್ರುವರಾಜಕುಮಾರ ಕುಬೇರಪ್ಪ ಹೊನ್ನಪ್ಪನವರ ಅವರನ್ನು ಶಿರಹಟ್ಟಿ ತಾಲೂಕು ವಕೀಲರ ಸಂಘದ ವತಿಯಿಂದ ಶಿಕ್ಷಕರ ಸೊಸೈಟಿಯಲ್ಲಿ ಗುರುವಾರ ಸನ್ಮಾನಿಸಿ ಅಭಿನಂದಿಸಲಾಯಿತು.

ಸನ್ಮಾನ ಸ್ವೀಕರಿಸಿದ ಬಳಿಕ ಮಾತನಾಡಿದ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ಮಾಜಿ ಕಾನೂನು ಸಚಿವ ಎಚ್.ಕೆ. ಪಾಟೀಲ ಅವರ ಅವಧಿಯಲ್ಲಿ ಡಿ.ಕೆ. ಹೊನ್ನಪ್ಪನವರ ಅವರಿಗೆ ಸಿಂಡಿಕೇಟ್ ಸದಸ್ಯರಾಗಿ ಅವಕಾಶ ದೊರೆತಿರುವುದು ಸಂತಸದ ಸಂಗತಿ. ಹಲವು ವರ್ಷಗಳಿಂದ ಸಾಮಾಜಿಕ ಸೇವೆಯಲ್ಲಿ ತೊಡಗಿರುವ ಅವರು ಗ್ರಾಮೀಣ ಭಾಗದ ಜನರ ಅಭಿವೃದ್ಧಿಗೆ ಇನ್ನಷ್ಟು ಸೇವೆ ಸಲ್ಲಿಸಲಿ ಎಂದು ಹಾರೈಸಿದರು.

ವಕೀಲ ಎಸ್.ಎಸ್. ಪಾಟೀಲ ಮಾತನಾಡಿ, ಸಾಮಾಜಿಕ ಕಳಕಳಿ ಹೊಂದಿರುವ ಡಿ.ಕೆ. ಹೊನ್ನಪ್ಪನವರ ಅವರು ಭೂ ನ್ಯಾಯ ಮಂಡಳಿ ಸದಸ್ಯರಾಗಿ, ಜಿಲ್ಲಾ ಎಸ್‌ಸಿ/ಎಸ್‌ಟಿ ದೌರ್ಜನ್ಯ ತಡೆ ಸಮಿತಿ ಸದಸ್ಯರಾಗಿ ಸೇವೆ ಸಲ್ಲಿಸಿದ್ದು, ಇದೀಗ ಕಾನೂನು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾಗಿ ನೇಮಕಗೊಂಡಿರುವುದು ಹೆಮ್ಮೆಯ ವಿಷಯವಾಗಿದೆ. ಇದೇ ವೇಳೆ ಶಿರಹಟ್ಟಿ ನ್ಯಾಯಾಲಯದ ನೂತನ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಅಗತ್ಯ ಅನುದಾನ ಮತ್ತು ಸೌಲಭ್ಯ ಒದಗಿಸಬೇಕೆಂದು ಆಗ್ರಹಿಸಿದರು.

ಕಾರ್ಯಕ್ರಮದಲ್ಲಿ ಎಸ್.ವೈ. ಗೊಬ್ರಗುಂಪಿ, ಅನಿಲ್ ಮಾನೆ, ಎ.ಎ. ಬೇವಿನಗಿಡದ, ಬಿ.ವಿ. ನೇಕಾರ, ಬಿ.ಎಸ್. ಪಶುಪತಿಹಾಳ, ಮಹೇಶ ದಾನಪ್ಪಗೌಡರ, ಎಂ.ಎಸ್. ಪವಾಡಶೆಟ್ಟರ, ಎಸ್.ಪಿ. ಮುಧೋಳಕರ, ಹೇಮಂತ ಕೆಂಗೊಂಡ, ಆರ್.ಎಂ. ಪೂಜಾರ, ಎಸ್.ಕೆ. ಪುರ್ತಗೇರಿ ಸೇರಿದಂತೆ ವಕೀಲರು ಹಾಗೂ ಗಣ್ಯರು ಉಪಸ್ಥಿತರಿದ್ದರು.


ಸಂಕ್ಷಿಪ್ತ ಸುದ್ದಿಗಳು

## ಸೋನಂ ವಾಂಗಚುಕ್ ಉಪವಾಸ ಅಂತ್ಯಗೊಳಿಸಲು ಮನವಿ

ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಶಿಕ್ಷಣ ವ್ಯವಸ್ಥೆಯಲ್ಲಿ ಸುಧಾರಣೆ ತರಬೇಕು ಎಂದು ಆಗ್ರಹಿಸಿ ಶಿಕ್ಷಣ ತಜ್ಞ ಹಾಗೂ ಪರಿಸರವಾದಿ ಸೋನಂ ವಾಂಗಚುಕ್ ನಡೆಸುತ್ತಿರುವ ಉಪವಾಸ ಸತ್ಯಾಗ್ರಹವನ್ನು ಅಂತ್ಯಗೊಳಿಸಿ, ಸರ್ಕಾರ ಪ್ರತಿಭಟನಾಕಾರರೊಂದಿಗೆ ಸಂವಾದ ನಡೆಸಬೇಕು ಎಂದು ಜಿಲ್ಲಾ ಅಂಬೇಡ್ಕರ್ ವಿಚಾರಧಾರಾ ಸಮಿತಿಯ ಅಧ್ಯಕ್ಷ ಎಚ್. ವೈ. ಮಿಶನ್ನವರ ಒತ್ತಾಯಿಸಿದರು. ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಉಪವಾಸ ಸತ್ಯಾಗ್ರಹವು 19ನೇ ದಿನಕ್ಕೆ ಕಾಲಿಟ್ಟಿದ್ದು, ಸೋನಂ ವಾಂಗಚುಕ್ ಅವರ ಆರೋಗ್ಯ ಹದಗೆಡುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ದೇಶದ ಅಮೂಲ್ಯ ವ್ಯಕ್ತಿತ್ವವನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಪ್ರಜ್ಞಾವಂತರು ಉಪವಾಸ ಕೈಬಿಟ್ಟು ಹೋರಾಟವನ್ನು ಮುಂದುವರಿಸುವಂತೆ ಮನವೊಲಿಸಬೇಕು ಎಂದು ಹೇಳಿದರು.ನೀಟ್ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಸೇರಿದಂತೆ ಶಿಕ್ಷಣ ಕ್ಷೇತ್ರದ ಹಲವು ವಿಚಾರಗಳಲ್ಲಿ ವಿದ್ಯಾರ್ಥಿಗಳು ಹಾಗೂ ಯುವಕರು ನಡೆಸುತ್ತಿರುವ ಪ್ರತಿಭಟನೆಗಳ ಬಗ್ಗೆ ಕೇಂದ್ರ ಸರ್ಕಾರ ಸಂವಾದ ನಡೆಸಬೇಕು. ಪ್ರತಿಭಟನಾಕಾರರ ಬೇಡಿಕೆಗಳಿಗೆ ಸ್ಪಂದಿಸುವುದು ಪ್ರಜಾಪ್ರಭುತ್ವದ ಭಾಗವಾಗಿದ್ದು, ಸಂವಾದದಿಂದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು. ಪ್ರಜಾಪ್ರಭುತ್ವದಲ್ಲಿ ಸಂವಾದಕ್ಕೆ ಮಹತ್ವವಿದ್ದು, ಸರ್ಕಾರ ಪ್ರತಿಭಟನೆಗಳನ್ನು ನಿರ್ಲಕ್ಷಿಸುವ ಬದಲು ಜನರ ಧ್ವನಿಗೆ ಸ್ಪಂದಿಸಬೇಕು ಎಂದು ಅವರು ಆಗ್ರಹಿಸಿದರು.

## ಜು.19ರಂದು ಬಣಜಿಗ ಸಂಘದ ವಾರ್ಷಿಕೋತ್ಸವ



ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ-ಕೋಡಿಕೊಪ್ಪ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ 13ನೇ ವಾರ್ಷಿಕೋತ್ಸವ, ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭ ಜುಲೈ 19ರಂದು ಪಟ್ಟಣದ ಗಜೇಂದ್ರಗಡ ರಸ್ತೆಯಲ್ಲಿರುವ ಶ್ರೀ ಬಸವೇಶ್ವರ ಇಂಜಿನಿಯರಿಂಗ್ ವರ್ಕ್ಸ್ ಆವರಣದಲ್ಲಿ ನಡೆಯಲಿದೆ ಎಂದು ಸಂಘದ ಅಧ್ಯಕ್ಷ ಶಿವಯೋಗಿ ಜಕ್ಕಲಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ ಅಂದಪ್ಪ ಜವಳಿ ಉದ್ಘಾಟಿಸಲಿದ್ದು, ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಎ. ಬಳಿಗೇರ ಉಪನ್ಯಾಸ ನೀಡಲಿದ್ದಾರೆ. ಜಿಲ್ಲಾ ಬಣಜಿಗ ಸಂಘದ ಅಧ್ಯಕ್ಷ ಈಶಣ್ಣ ಮುನವಳ್ಳಿ, ನಿವೃತ್ತ ಪ್ರಾಧ್ಯಾಪಕ ಡಾ. ಎ.ಕೆ. ನಾಶಿ, ಜಿಲ್ಲಾ ಬಿಜೆಪಿ ಅಧ್ಯಕ್ಷ ತೋಟಪ್ಪ ಕುರಡಗಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದು ಹೇಳಿದರು. 2025-26ನೇ ಸಾಲಿನ ಎಸ್ಎಸ್ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳು, ನಿವೃತ್ತ ನೌಕರರು ಹಾಗೂ ಸಮಾಜದ ದಾನಿಗಳನ್ನು ಸಮಾರಂಭದಲ್ಲಿ ಸನ್ಮಾನಿಸಿ ಪ್ರತಿಭಾ ಪುರಸ್ಕಾರ ನೀಡಲಾಗುವುದು. ಸಂಘದ ಪದಾಧಿಕಾರಿ ಬಸವರಾಜ ವಂಕಲಕುಂಟಿ ಮಾತನಾಡಿ, ಸಮಾಜದ ಯುವಜನರಿಗೆ ಮಾರ್ಗದರ್ಶನ ನೀಡುವ ಉದ್ದೇಶದಿಂದ ವಾರ್ಷಿಕೋತ್ಸವ ಆಯೋಜಿಸಲಾಗಿದ್ದು, ಸಂಗೀತ ಶಿಕ್ಷಕಿ ಗೀತಾ ಭೋಪಳಾಪೂರ ಅವರಿಂದ ಸಂಗೀತ ಕಾರ್ಯಕ್ರಮ ಹಾಗೂ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ತಿಳಿಸಿದರು. ಗೌರವಾಧ್ಯಕ್ಷ ಗುರುಪಾದಪ್ಪ ಬೆಲ್ಲದ ಮಾತನಾಡಿ, ಸುಮಾರು 80 ವರ್ಷಗಳ ಇತಿಹಾಸ ಹೊಂದಿರುವ ಸಂಘವು 2013ರಿಂದ ಹೊಸ ಚೈತನ್ಯದೊಂದಿಗೆ ವಾರ್ಷಿಕೋತ್ಸವ ಆಚರಿಸುತ್ತಾ ಸಮಾಜಮುಖಿ ಚಟುವಟಿಕೆಗಳನ್ನು ವಿಸ್ತರಿಸಿದೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಬಸಪ್ಪ ಸಂಗಳದ, ಕುಬೇರಪ್ಪ ನಾಶಿಪುಡಿ, ಶರಣಪ್ಪ ಹಂಜಿ, ಚಿದಾನಂದ ವಂಕಲಕುಂಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಸಾಂಸ್ಕೃತಿಕ ಚಟುವಟಿಕೆಗಳಿಗೆ ಇಲಾಖೆಯ ಯೋಜನೆಗಳ ಸದ್ಬಳಕೆಗೆ ಬಸವರಾಜ ಬಳ್ಳಾರಿ ಕರೆ

# ಜನಪದ ಸೊಗಡಿಗೆ ಮನಸೋತ ಪ್ರೇಕ್ಷಕರು

ವಿಜಯಸಾಕ್ಷಿ ಸುದ್ದಿ, ಗದಗ

ಜನಪದ ಕಲೆ, ತಾತ್ವಿಕ ವಿಚಾರ ಮತ್ತು ಸಂಗೀತದ ಸೊಗಡನ್ನು ಒಂದೇ ವೇದಿಕೆಯಲ್ಲಿ ಅನಾವರಣಗೊಳಿಸಿದ ತಾತ್ವಿಕ ಜನಪದ ಸೌರಭಟ ಕಾರ್ಯಕ್ರಮ ನಗರದ ಹೊಸಪೇಟೆ ಚಕ್‌ನ ಕಾಳಿಕಾದೇವಿ ಸಮುದಾಯ ಭವನದಲ್ಲಿ ಸಾಂಸ್ಕೃತಿಕ ರಂಗು ತುಂಬಿತು. ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಬೆಂಗಳೂರು ಸಹಯೋಗದಲ್ಲಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಸಾಂಪ್ರದಾಯಿಕ ಕಲೆ ಹಾಗೂ ಕಲಾವಿದರನ್ನು ಉಳಿಸಿ ಬೆಳೆಸಲು ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ಸಾಂಸ್ಕೃತಿಕ ಸಂಘಟನೆಗಳು ಹಾಗೂ ಕಲಾವಿದರು ಅವುಗಳ ಪ್ರಯೋಜನ ಪಡೆಯಬೇಕು ಎಂದು ಹೇಳಿದರು.



ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಕಳೆದ 15 ವರ್ಷಗಳಿಂದ ಸಮಾಜಮುಖಿ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಮಕ್ಕಳಲ್ಲಿ ರಂಗಾಸಕ್ತಿ ಬೆಳೆಸುತ್ತಿದ್ದು, ಗದುಗಿನ ಸಾಂಸ್ಕೃತಿಕ ವಲಯದಲ್ಲಿ ಮಾದರಿ ಸಂಸ್ಥೆಯಾಗಿ ಗುರುತಿಸಿಕೊಂಡಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪತ್ರಕರ್ತ ಸೂರಜ್ ಮಯೇಕರ ಅವರು ಮಣ್ಣಿನ ಕಲಾಕೃತಿಗಳುಟಿ ವಿಷಯದ ಕುರಿತು ಉಪನ್ಯಾಸ ನೀಡಿದರು. ಶಿವು ಭಜಂತ್ರಿ ಮತ್ತು ತಂಡ ಹಾಗೂ ಬಂಜಾರ ಅಕಾಡೆಮಿ ಸದಸ್ಯೆ ಸಾವಿತ್ರಿ ಲಮಾಣಿ ಅವರ ತಾತ್ವಿಕ ಜನಪದ ಗಾಯನ ಸಭಿಕರ ಮನಗೆದ್ದಿತು.

ಕರ್ನಾಟಕ ಜನಪದ ಅಕಾಡೆಮಿ ಸದಸ್ಯ ಶಂಕ್ರಣ್ಣ ಸಂಕಣ್ಣವರ ಜನಪದ ಸಂಸ್ಕೃತಿಯ ಬೆಳವಣಿಗೆಯ ಕುರಿತು ಮಾತನಾಡಿದರು. ಬೆಟಗೇರಿ ಶ್ರೀಕಾಳಿಕಾದೇವಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಶ್ರೀಧರ ಕೊಣ್ಣೂರ ಅಧ್ಯಕ್ಷತೆ ವಹಿಸಿದ್ದರು.

> ಸಾಂಪ್ರದಾಯಿಕ ಕಲೆ ಮತ್ತು ಕಲಾವಿದರನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಸಾಂಸ್ಕೃತಿಕ ಸಂಘಟನೆಗಳು ಹಾಗೂ ಕಲಾವಿದರು ಅವುಗಳ ಸದುಪಯೋಗ ಪಡೆದುಕೊಳ್ಳಬೇಕು.
> **- ಡಾ. ಬಸವರಾಜ ಬಳ್ಳಾರಿ,** ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ

ಕಾರ್ಯಕ್ರಮದಲ್ಲಿ ಸುರೇಶ ಕೊಪ್ಪದ, ಡಾ. ದತ್ತಪ್ರಸನ್ನ ಲ. ಪಾಟೀಲ, ವಿಶ್ವನಾಥ ಯ. ಕಮ್ಮಾರ, ಎನ್.ಐ. ಪತ್ತಾರ, ಶ್ರೀನಿವಾಸ ಹುಬ್ಬಳ್ಳಿ, ವಿಶ್ವನಾಥ ಬೇಂದ್ರೆ, ಸತೀಶ ಹೊರಪೇಟೆ, ಪ್ರಕಾಶ ಬಡಿಗೇರ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಶ್ರೀಮತಿ ಸಾವಿತ್ರಿ ಲಮಾಣಿ ಪ್ರಾರ್ಥಿಸಿದರು. ಅಶೋಕ ಸುತಾರ ಸ್ವಾಗತಿಸಿದರು. ಮೌನೇಶ ಸಿ. ಬಡಿಗೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಶ್ವನಾಥ ಯ. ಕಮ್ಮಾರ ಕಾರ್ಯಕ್ರಮ ನಿರೂಪಿಸಿದರು.

## ಮಹಿಳಾ ಆರೋಗ್ಯ ಸೇವೆಗೆ ಡಾ. ಪ್ರಭಾ ದೇಸಾಯಿಗೆ ಗೌರವ



ವಿಜಯಸಾಕ್ಷಿ ಸುದ್ದಿ, ಗದಗ

ವೈದ್ಯರು ಕೇವಲ ರೋಗಕ್ಕೆ ಚಿಕಿತ್ಸೆ ನೀಡುವವರಲ್ಲ, ರೋಗಿಗಳ ಬದುಕಿಗೆ ಹೊಸ ಭರವಸೆ ನೀಡುವ ದೇವತಾಸಮಾನ ವ್ಯಕ್ತಿತ್ವಗಳಾಗಿದ್ದಾರೆ ಎಂದು ಜೈಂಟ್ಸ್ ಗ್ರೂಪ್ ಆಫ್ ಸಖಿ ಸಹೇಲಿ ಗದಗ ಅಧ್ಯಕ್ಷೆ ಶ್ರೀಮತಿ ಹೇಮ ಪೊಂಗೋಲಿಯ ಹೇಳಿದರು.

ವೈದ್ಯರ ದಿನಾಚರಣೆ ಅಂಗವಾಗಿ ಜೈಂಟ್ಸ್ ಗ್ರೂಪ್ ಆಫ್ ಸಖಿ ಸಹೇಲಿ ವತಿಯಿಂದ ಸಮಾಜಸೇವೆ ಹಾಗೂ ಮಹಿಳಾ ಆರೋಗ್ಯ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವ ಖ್ಯಾತ ಸ್ತ್ರೀರೋಗ ತಜ್ಞೆ, ಎಂಡೋಸ್ಕೋಪಿ ಶಸ್ತ್ರಚಿಕಿತ್ಸಕಿ ಹಾಗೂ ಸ್ಪರ್ಶ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಸ್ಥೆ ಡಾ. ಪ್ರಭಾ ಡಿ. ದೇಸಾಯಿ ಅವರನ್ನು ಸನ್ಮಾನಿಸಿ ಅವರು ಮಾತನಾಡಿದರು.

ಕಳೆದ ಎರಡು ದಶಕಗಳಿಂದ ಮಹಿಳಾ ಆರೋಗ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಡಾ. ಪ್ರಭಾ ದೇಸಾಯಿ ಅವರು ಅನೇಕ ರಾಜ್ಯ ಹಾಗೂ ರಾಷ್ಟ್ರೀಯ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ಇತ್ತೀಚೆಗೆ ಟಿಸುವರ್ಣ ಸಾಧಕಿ2026ಟಿ ಪ್ರಶಸ್ತಿಗೂ ಆಯ್ಕೆಯಾಗಿದ್ದಾರೆ. ಗದಗ ಆಬ್ಸ್ಟೆಟ್ರಿಕ್ ಮತ್ತು ಗೈನಕಾಲಜಿಕಲ್ ಸೊಸೈಟಿ (ಎಣಎಖ) ಅಧ್ಯಕ್ಷೆಯಾಗಿ ಎರಡು ಬಾರಿ ಸೇವೆ ಸಲ್ಲಿಸಿರುವ ಅವರು ವೈದ್ಯಕೀಯ ಶಿಕ್ಷಣ, ಸಂಶೋಧನೆ ಹಾಗೂ ಉಚಿತ ಮಹಿಳಾ ಆರೋಗ್ಯ ತಪಾಸಣಾ ಶಿಬಿರಗಳ ಮೂಲಕ ಸಮಾಜಮುಖಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಪ್ರಶಂಸಿಸಲಾಯಿತು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಶ್ರೀಮತಿ ಚಂದ್ರಕಲಾ ಸ್ಥಾವರಮಠ ಕಾರ್ಯಕ್ರಮ ನಿರೂಪಿಸಿದರು. ನಿರ್ದೇಶಕರಾದ ಶ್ರೀಮತಿ ನಿರ್ಮಲಾ ಪಾಟೀಲ ಹಾಗೂ ಶ್ರೀಮತಿ ಆಶಾ ಪಟ್ಟಣಶೆಟ್ಟಿ ಪರಿಚಯಿಸಿದರು. ಖಜಾಂಚಿ ಅನುರಾಧ ಅಮಾತ್ಯಗೌಡರ ಸ್ವಾಗತಿಸಿದರು. ಸದಸ್ಯೆಯರಾದ ರೇಖಾ ರೊಟ್ಟಿ ಮತ್ತು ಶಶಿಕಲಾ ಮಾಲಿಪಾಟೀಲ ಉಪಸ್ಥಿತರಿದ್ದರು.

## ಸಾಯಿ ಮಂದಿರದಲ್ಲಿ ಜು.19ರಿಂದ ಗುರು ಪೂರ್ಣಿಮೋತ್ಸವ



ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿಯ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗದ ವತಿಯಿಂದ ಶ್ರೀ ಗುರು ಪೂರ್ಣಿಮೋತ್ಸವ2026 ಅಂಗವಾಗಿ ಜುಲೈ 19ರಿಂದ 29ರವರೆಗೆ ಹಾತಲಗೇರಿ ರಸ್ತೆಯ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ವಿವಿಧ ಧಾರ್ಮಿಕ, ಆಧ್ಯಾತ್ಮಿಕ ಹಾಗೂ ಭಕ್ತಿಪರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಉತ್ಸವದ ಅಂಗವಾಗಿ ಜುಲೈ 19ರಿಂದ 28ರವರೆಗೆ ಪ್ರತಿದಿನ ಸಂಜೆ 7ರಿಂದ 8 ಗಂಟೆಯವರೆಗೆ ಹಿರಿಯ ಆಧ್ಯಾತ್ಮಿಕ ಚಿಂತಕ ಡಾ. ಎಸ್.ಬಿ. ಶೆಟ್ಟರ ಅವರಿಂದ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ ನಡೆಯಲಿದೆ. ಸಾಯಿಬಾಬರ ಜೀವನ ಸಂದೇಶ, ಗುರುಭಕ್ತಿ, ಸೇವೆ, ಸತ್ಯ, ಸದಾಚಾರ ಹಾಗೂ ಮಾನವೀಯ ಮೌಲ್ಯಗಳ ಕುರಿತು ಭಕ್ತರಿಗೆ ಪ್ರವಚನ ನೀಡಲಾಗುವುದು.

ಜುಲೈ 22ರಿಂದ 28ರವರೆಗೆ ಪ್ರತಿದಿನ ಬೆಳಿಗ್ಗೆ 10ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಸಾಮೂಹಿಕ ಶ್ರೀ ಸಾಯಿ ಸಚ್ಚರಿತ್ರೆ ಪಾರಾಯಣ ಕಾರ್ಯಕ್ರಮ ನಡೆಯಲಿದೆ.

ಜುಲೈ 26ರಂದು ಬೆಳಿಗ್ಗೆ 9 ಗಂಟೆಯಿಂದ ಜೋಳಿಗೆ ಭಿಕ್ಷೆ ಕಾರ್ಯಕ್ರಮ ಆಯೋಜಿಸಲಾಗಿದ್ದು, ಶ್ರೀ ಸಾಯಿ ಮಂದಿರದಿಂದ ವಿವೇಕಾನಂದ ಬಡಾವಣೆ ಹಾಗೂ ಕರಿಯಮ್ಮಕಲ್ಲ ಬಡಾವಣೆ ಮಾರ್ಗವಾಗಿ ಶ್ರೀ ರಾಘವೇಂದ್ರಸ್ವಾಮಿ ಮಠದ ಮೂಲಕ ಮೆರವಣಿಗೆ ಮರಳಿ ಮಂದಿರಕ್ಕೆ ಆಗಮಿಸಲಿದೆ.

ಉತ್ಸವದ ಸಮಾರೋಪದ ಅಂಗವಾಗಿ ಜುಲೈ 29ರಂದು ಶ್ರೀ ಶಿರಡಿ ಸಾಯಿಬಾಬಾರ ಸಮಾಧಿ ಶತಾಬ್ದಿ ಸ್ಮರಣೋತ್ಸವ ಹಾಗೂ ಗುರು ಪೂರ್ಣಿಮೆ ವಿಶೇಷ ಆಚರಣೆ ನಡೆಯಲಿದ್ದು, ಕಾಕಡ ಆರತಿ, ಮಂಗಳಸ್ನಾನ, ರುದ್ರಾಭಿಷೇಕ, ಅಲಂಕಾರ ಪೂಜೆ, ಮಹಾಪೂಜೆ, ಅನ್ನಸಂತರ್ಪಣೆ, ಸಾಮೂಹಿಕ ಶ್ರೀ ಸಾಯಿ ಸತ್ಯನಾರಾಯಣ ಪೂಜೆ, ಧೂಪಾರತಿ ಹಾಗೂ ಶೇಜಾರತಿ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ.

ಭಕ್ತರು ಮಹಾಅನ್ನಸಂತರ್ಪಣೆಗಾಗಿ ದವಸ-ಧಾನ್ಯ ಅಥವಾ ನಗದು ರೂಪದಲ್ಲಿ ದೇಣಿಗೆ ನೀಡಬಹುದಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಾಯಿನಾಥರ ಕೃಪೆಗೆ ಪಾತ್ರರಾಗುವಂತೆ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

## ಶ್ಲೋಕ ಕಲಿಕೆಗೆ ಮಹಿಳೆಯರು, ಮಕ್ಕಳಿಂದ ಉತ್ತಮ ಸ್ಪಂದನೆ

ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸರಾಫ್ ಬಜಾರ್‌ನ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ಎಸ್ಎಸ್‌ಕೆ ಶ್ರೀ ಜಗದಂಬಾ ಮಹಿಳಾ ಮಂಡಳದ ವತಿಯಿಂದ ಮಹಿಳೆಯರು ಹಾಗೂ ಮಕ್ಕಳಿಗಾಗಿ ನಾಲ್ಕು ದಿನಗಳ ಶ್ಲೋಕ ಕಲಿಕಾ ತರಬೇತಿ ಶಿಬಿರ ಯಶಸ್ವಿಯಾಗಿ ನಡೆಯಿತು.ಜುಲೈ 10ರಿಂದ 13ರವರೆಗೆ ಪ್ರತಿದಿನ ಮಧ್ಯಾಹ್ನ 3.30ರಿಂದ 5 ಗಂಟೆಯವರೆಗೆ ನಡೆದ ತರಬೇತಿಯಲ್ಲಿ ಗದುಗಿನ ಶ್ರೀಮತಿ ಪಾರ್ವತಿ ಹೆಗ್ಗಡಿಕಟ್ಟಿ (ಆರ್ಯವೈಶ್ಯ) ಅವರು ಶ್ಲೋಕಗಳನ್ನು ಬೋಧಿಸಿದರು.

ದಿನನಿತ್ಯ ಪಠಿಸುವ ಶ್ಲೋಕಗಳ ಜೊತೆಗೆ ಗಣೇಶ ಪಂಚರತ್ನ ಸ್ತೋತ್ರ, ತ್ರಿಪುರಸುಂದರಿ ಅಷ್ಟಕಂ, ಕಾಲಭೈರವಾಷ್ಟಕಂ ಹಾಗೂ ಶ್ರೀಚಕ್ರ ಮಹಿಮೆ ಕುರಿತು ಅವರು ತರಬೇತಿ ನೀಡಿದರು. ಶಿಬಿರದ ಕೊನೆಯ ದಿನ ಭಾಗವಹಿಸಿದವರ ಕೋರಿಕೆಯ ಮೇರೆಗೆ ಅವರು ಹಾಡಿದ ಶಿವತಾಂಡವ ಗೀತೆ ಭಕ್ತರನ್ನು ರೋಮಾಂಚನಗೊಳಿಸಿತು.



ಸುಮಾರು 15ರಿಂದ 20 ಮಂದಿ ಮಹಿಳೆಯರು ಹಾಗೂ ಮಕ್ಕಳು ಈ ತರಬೇತಿಯ ಪ್ರಯೋಜನ ಪಡೆದುಕೊಂಡರು.

## ಸೇವಾನಿವೃತ್ತ ನೌಕರ ಮಲ್ಲಪ್ಪ ಹರಿಜನರಿಗೆ ಸನ್ಮಾನ

ವಿಜಯಸಾಕ್ಷಿ ಸುದ್ದಿ, ಡಂಬಳ

ಅಂಗವೈಕಲ್ಯ ಜೀವನಕ್ಕೆ ಅಡ್ಡಿಯಲ್ಲ, ಸಾಧನೆಗೆ ಆತ್ಮವಿಶ್ವಾಸ ಮತ್ತು ಛಲವೇ ಮುಖ್ಯ ಎಂಬುದನ್ನು ತಮ್ಮ ಬದುಕಿನ ಮೂಲಕ ಸಾಬೀತುಪಡಿಸಿದ ತೋಂಟದಾರ್ಯ ವಿದ್ಯಾಪೀಠದ ಸೇವಾನಿವೃತ್ತ ದ್ವಿತೀಯ ದರ್ಜೆ ಸಹಾಯಕ ಮಲ್ಲಪ್ಪ ಕೆಂಚಮ್ಮ ಹರಿಜನ ಅವರನ್ನು ಅವರ ಗೆಳೆಯರ ಬಳಗ ಹಾಗೂ ಗಣ್ಯರು ಆತ್ಮೀಯವಾಗಿ ಸನ್ಮಾನಿಸಿದರು.

ಡಂಬಳ ಗ್ರಾಮದ ತೋಂಟದಾರ್ಯ ವಿದ್ಯಾಪೀಠದ ಬಾಲಕಿಯರ ಹಾಗೂ ಬಾಲಕರ ಪ್ರೌಢಶಾಲೆಯಲ್ಲಿ ದೀರ್ಘಕಾಲ ಸೇವೆ ಸಲ್ಲಿಸಿ ನಿವೃತ್ತರಾದ ಮಲ್ಲಪ್ಪ ಹರಿಜನ ಅವರ ನಿವಾಸದಲ್ಲಿ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ದಲಿತ ಸಮುದಾಯದ ಮುಖಂಡ ಎಸ್.ಎನ್. ಬಳ್ಳಾರಿ ಮಾತನಾಡಿ, ಶೋಷಿತ ಹಾಗೂ ಹಿಂದುಳಿದ ವರ್ಗಗಳಿಗೆ ಶಿಕ್ಷಣ ಕನಸಾಗಿದ್ದ ಕಾಲಘಟ್ಟದಲ್ಲೇ ಉತ್ತಮ ಶಿಕ್ಷಣ ಪಡೆದು, ಅಂಗವೈಕಲ್ಯವನ್ನು ಮೀರಿ ಸರ್ಕಾರಿ ಸೇವೆಯಲ್ಲಿ ಮಾದರಿಯಾಗಿರುವುದು ಯುವಪೀಳಿಗೆಗೆ ಸ್ಫೂರ್ತಿದಾಯಕವಾಗಿದೆ ಎಂದು ಹೇಳಿದರು.

ಶಿಕ್ಷಕರಾದ ರಮೇಶ ಕೊರ್ಲಹಳ್ಳಿ ಹಾಗೂ ಆನಂದ ತಗ್ಗಿನಮನಿ ಪ್ರಾಸ್ತಾವಿಕವಾಗಿ ಮಾತನಾಡಿ, ಮಲ್ಲಪ್ಪ ಹರಿಜನ ಅವರು ದೈಹಿಕ ನ್ಯೂನತೆಯನ್ನು ಲೆಕ್ಕಿಸದೆ ಇಲಾಖೆಗೆ ಸಲ್ಲಿಸಿದ ಸೇವೆ ಸ್ಮರಣೀಯವಾಗಿದೆ. ಅವರ ಶಿಕ್ಷಣ ಮತ್ತು ಬದುಕಿನ ಸಾಧನೆಯ ಹಿಂದೆ ತಾಯಿ ಹಾಗೂ ಸಹೋದರನ ತ್ಯಾಗವೂ ಮಹತ್ತರ ಪಾತ್ರ ವಹಿಸಿದೆ ಎಂದು ತಿಳಿಸಿದರು.

ಆನಂದ ಹಡಪದ, ನಜೀರ ಮಕಾನದಾರ ಸೇರಿದಂತೆ ಹಲವರು ಮಲ್ಲಪ್ಪ ಹರಿಜನ ಅವರ ಸರಳತೆ, ಸೇವಾ ಮನೋಭಾವ ಹಾಗೂ ಪರಿಶ್ರಮವನ್ನು ಸ್ಮರಿಸಿ ಅಭಿನಂದಿಸಿದರು.



ಕಾರ್ಯಕ್ರಮದಲ್ಲಿ ಪ್ರೊ. ಸತೀಶ ಪಾಸಿ, ನಿವೃತ್ತ ಶಿಕ್ಷಕ ರಾಮಣ್ಣ ಹೊಸಕೇರಿ, ಮೌನೇಶ ಬಡಿಗೇರ, ಹನಮಂತ ಕರಡ್ಡಿ, ಈರಣ್ಣ ಶಿವಶೆಟ್ಟರ, ಮರಿಯಪ್ಪ ಸಿದ್ದಣ್ಣವರ, ಸಿದ್ದಪ್ಪ ತಗ್ಗಿನಮನಿ, ಆನಂದ ಕುಮ್ಮಿ, ರಂಗಪ್ಪ ಕಟ್ಟೆಣ್ಣವರ, ಮಲ್ಲಪ್ಪ ಪೂಜಾರ, ಆನಂದ ಹಡಪದ, ಈರಣ್ಣ ಹುಂಬಿ, ನಾಗಪ್ಪ ಬಿಕನಹಳ್ಳಿ, ಮಮತಾಜ ಡಾಲಾಯತ ಸೇರಿದಂತೆ ಗೆಳೆಯರ ಬಳಗದ ಅನೇಕರು ಉಪಸ್ಥಿತರಿದ್ದರು.

### ಹಾಜರಾತಿ ವಿನಾಯಿತಿ, ಉದ್ಯೋಗ ಮೀಸಲಾತಿ, ₹5 ಲಕ್ಷ ಪ್ರೋತ್ಸಾಹಧನ | ಆ.29ರಂದು ಕ್ರೀಡಾ ಪ್ರಶಸ್ತಿ ಪ್ರದಾನ

## ಕ್ರೀಡಾಪಟುಗಳಿಗೆ ಸರ್ಕಾರದ ಬಂಪರ್ ಕೊಡುಗೆ



ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ ಕ್ರೀಡಾಪಟುಗಳ ಶೈಕ್ಷಣಿಕ, ಉದ್ಯೋಗ ಹಾಗೂ ಕ್ರೀಡಾ ಭವಿಷ್ಯವನ್ನು ಬಲಪಡಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮಹತ್ವದ ನಿರ್ಧಾರಗಳನ್ನು ಕೈಗೊಂಡಿದ್ದು, ಹಾಜರಾತಿ ವಿನಾಯಿತಿ, ಉದ್ಯೋಗ ಮೀಸಲಾತಿ, ವಿಶೇಷ ಪ್ರೋತ್ಸಾಹಧನ ಸೇರಿದಂತೆ ಹಲವು ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಉಪ ಮುಖ್ಯಮಂತ್ರಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವ ಡಾ.ಜಿ. ಪರಮೇಶ್ವರ್ ತಿಳಿಸಿದರು.

ಬೆಂಗಳೂರಿನ ಯವನಿಕಾ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಹಾಗೂ ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಶೇ.15ರಷ್ಟು, ಅಂತರರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪಾಲ್ಗೊಳ್ಳುವವರಿಗೆ ಶೇ.25ರಷ್ಟು ಹಾಜರಾತಿ ವಿನಾಯಿತಿ ನೀಡಲಾಗಿದ್ದು, ಈ ಕುರಿತು ಸರ್ಕಾರ ಆದೇಶ ಹೊರಡಿಸಿದೆ ಎಂದು ಹೇಳಿದರು.

ಕ್ರೀಡಾಕೂಟಗಳಲ್ಲಿ ಪಾಲ್ಗೊಳ್ಳುವ ಕಾರಣದಿಂದ ವಿದ್ಯಾರ್ಥಿಗಳು ಪರೀಕ್ಷೆಯಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಹಾಜರಾತಿ ಶೇ.50 ಇದ್ದರೂ ಅರ್ಹ ಕ್ರೀಡಾಪಟುಗಳಿಗೆ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದರು. ಸರ್ಕಾರದ ವಿವಿಧ ಇಲಾಖೆಗಳಲ್ಲಿನ 72 ಸಾವಿರ ಹುದ್ದೆಗಳ ನೇಮಕಾತಿಯಲ್ಲಿ ಶೇ.2ರಷ್ಟು ಮೀಸಲಾತಿಯನ್ನು ಕ್ರೀಡಾಪ ಟುಗಳಿಗೆ ನೀಡಲಾಗುತ್ತಿದ್ದು, ಸುಮಾರು 2 ಸಾವಿರ ಹುದ್ದೆಗಳು ಕ್ರೀಡಾಪಟುಗಳಿಗೆ ಲಭ್ಯವಾಗಲಿವೆ. ಈ ಸಂಬಂಧ ಕರಡು ಅಧಿಸೂಚನೆ ಹೊರಡಿಸಲಾಗಿದ್ದು, ಆಕ್ಷೇಪಣೆಗಳ ಪರಿಶೀಲನೆಯ ಬಳಿಕ ಅಂತಿಮ ಅಧಿಸೂಚನೆ ಪ್ರಕಟಿಸಲಾಗುವುದು ಎಂದರು.

ಕಾಮನ್‌ವೆಲ್ತ್, ಏಷ್ಯನ್ ಹಾಗೂ ಏಷ್ಯನ್ ಪ್ಯಾರಾ ಗೇಮ್ಸ್‌ನಲ್ಲಿ ಕರ್ನಾಟಕವನ್ನು ಪ್ರತಿನಿಧಿಸುವ ಕ್ರೀಡಾಪಟುಗಳಿಗೆ ₹5 ಲಕ್ಷ ವಿಶೇಷ ಪ್ರೋತ್ಸಾಹಧನ ನೀಡಲಾಗುವುದು. ಜೊತೆಗೆ ಇಲಾಖೆ ವ್ಯಾಪ್ತಿಯಲ್ಲಿ ಖಾಲಿ ಇರುವ 50 ಖಾಯಂ ತರಬೇತುದಾರರ ಹುದ್ದೆಗಳನ್ನು ಶೀಘ್ರದಲ್ಲೇ ಭರ್ತಿ ಮಾಡಲಾಗುವುದು ಎಂದು ಹೇಳಿದರು.

ರಾಜ್ಯದ 32 ಸ್ಥಳಗಳಲ್ಲಿ ₹36 ಕೋಟಿ ವೆಚ್ಚದಲ್ಲಿ ಕ್ರೀಡಾಂಗಣಗಳ ಅಭಿವೃದ್ಧಿ ಕೈಗೆತ್ತಿಕೊಳ್ಳಲಾಗಿದೆ. ಕಂಠೀರವ ಕ್ರೀಡಾಂಗಣವನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಅಂತರರಾಷ್ಟ್ರೀಯ ಮಟ್ಟದ ಸೌಲಭ್ಯಗಳೊಂದಿಗೆ ಪುನರ್ ಅಭಿವೃದ್ಧಿಪಡಿಸಲಾಗುವುದು ಎಂದರು.

ಈ ವರ್ಷದಿಂದ ತಾಲೂಕು ಮಟ್ಟದಿಂದಲೇ ವ್ಯವಸ್ಥಿತವಾಗಿ ದಸರಾ ಕ್ರೀಡಾಕೂಟ ಆಯೋಜಿಸಲಾಗುವುದು. ಅಲ್ಲದೆ ಮೊದಲ ಬಾರಿಗೆ ಅಂತಾರಾಷ್ಟ್ರೀಯ ಯುವಜನೋತ್ಸವ ಆಯೋಜಿಸುವ ಚಿಂತನೆಯೂ ಸರ್ಕಾರಕ್ಕಿದೆ ಎಂದು ಮಾಹಿತಿ ನೀಡಿದರು.

### ಶಾಲಾ ಮಾಹಿತಿ ಪುಸ್ತಕ ಬಿಡುಗಡೆ, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಕರೆ

# ಶಾಲಾ ಸಂಸತ್‌ಗೆ ಚಾಲನೆ; ವಿದ್ಯಾರ್ಥಿಗಳಲ್ಲಿ ನಾಯಕತ್ವಕ್ಕೆ ಹೊಸ ಹೆಜ್ಜೆ

ವಿಜಯಸಾಕ್ಷಿ ಸುದ್ದಿ, ಹೊಳೆಆಲೂರು

ವಿದ್ಯಾರ್ಥಿಗಳಲ್ಲಿ ನಾಯಕತ್ವ, ಜವಾಬ್ದಾರಿ, ಸೇವಾ ಮನೋಭಾವ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬೆಳೆಸುವ ಉದ್ದೇಶದಿಂದ ಶ್ರೀ ಯಚ್ಚರೇಶ್ವರ ಅನುದಾನಿತ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 202627ನೇ ಶೈಕ್ಷಣಿಕ ಸಾಲಿನ ಶಾಲಾ ಸಂಸತ್ ಉದ್ಘಾಟನೆ ಹಾಗೂ ಶಾಲಾ ಮಾಹಿತಿ ಪುಸ್ತಕ ಬಿಡುಗಡೆ ಸಮಾರಂಭ ಗುರುವಾರ ನಡೆಯಿತು. ಕಾರ್ಯಕ್ರಮದಲ್ಲಿ ಎಸ್.ಕೆ.ವಿ.ಪಿ. ಪದವಿ ಮಹಾವಿದ್ಯಾಲಯದ ಉಪನ್ಯಾಸಕ ಡಾ. ವಿ.ಪಿ. ಪಾಟೀಲ ಶಾಲಾ ಸಂಸತ್ ಮಂತ್ರಿಮಂಡಲದ ಬೋರ್ಡ್ ಅನಾವರಣಗೊಳಿಸಿ ಮಾತನಾಡಿ, ಇಂದಿನ ವಿದ್ಯಾರ್ಥಿಗಳೇ ನಾಳಿನ ದೇಶದ ನಾಯಕರಾಗಲಿದ್ದು, ಶಾಲಾ ಸಂಸತ್ ಅವರಲ್ಲಿ ನಾಯಕತ್ವದ ಗುಣ, ಜವಾಬ್ದಾರಿ ಹಾಗೂ ಪ್ರಜಾಪ್ರಭುತ್ವದ ಅರಿವು ಬೆಳೆಸುವ ಅತ್ಯುತ್ತಮ ವೇದಿಕೆಯಾಗಿದೆ ಎಂದು ಹೇಳಿದರು. ಭಾರತೀಯ ಸಂವಿಧಾನದ ಆಶಯಗಳಾದ ಸಮಾನತೆ, ಸ್ವಾತಂತ್ರ್ಯ, ನ್ಯಾಯ ಮತ್ತು ಭ್ರಾತೃತ್ವವನ್ನು ಪ್ರತಿಯೊಬ್ಬ ವಿದ್ಯಾರ್ಥಿಯೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಶಿಕ್ಷಣದ ಜೊತೆಗೆ ಉತ್ತಮ ವ್ಯಕ್ತಿತ್ವ ವಿಕಾಸಕ್ಕೂ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು. ಸಂಸ್ಥೆಯ ಅಧ್ಯಕ್ಷ ಹಾಗೂ ಶಾಲಾ ರಾಷ್ಟ್ರಪತಿ ಎ.ಎನ್. ಬಡಿಗೇರ ಮಾತನಾಡಿ, ಶಾಲಾ ಸಂಸತ್ ಕೇವಲ ಹುದ್ದೆಗಳ ಹಂಚಿಕೆಯಲ್ಲ; ಜವಾಬ್ದಾರಿಯುತ ಹಾಗೂ ಆದರ್ಶ ನಾಗರಿಕರನ್ನು ರೂಪಿಸುವ ಪ್ರಾಯೋಗಿಕ ಶಿಕ್ಷಣವಾಗಿದೆ ಎಂದರು.



ಸಂಸ್ಥೆಯ ಗೌರವ ಕಾರ್ಯದರ್ಶಿ ಪಿ.ವಿ. ಪತ್ತಾರ ವಿದ್ಯಾರ್ಥಿಗಳು ತಮ್ಮ ಹಕ್ಕುಗಳ ಜೊತೆಗೆ ಕರ್ತವ್ಯಗಳನ್ನೂ ಅರಿತು ಶಾಲೆಯ ಎಲ್ಲ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಕರೆ ನೀಡಿದರು. ಮುಖ್ಯಸ್ಥ ಎಸ್.ಎಲ್. ಬದಾಮಿ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಾಸದಲ್ಲಿ ಶಾಲಾ ಸಂಸತ್ತಿನ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು. ಬಿ.ಎಫ್. ಬಾಲನಗೌಡ್ರ ನೂತನವಾಗಿ ಆಯ್ಕೆಯಾದ ಪ್ರಧಾನಮಂತ್ರಿ, ಉಪಪ್ರಧಾನಮಂತ್ರಿ ಹಾಗೂ ಸಚಿವರಿಗೆ ಪ್ರಮಾಣವಚನ ಬೋಧಿಸಿದರು. ಇದೇ ಸಂದರ್ಭದಲ್ಲಿ ಶಾಲೆಯ ಸಾಧನೆಗಳು ಹಾಗೂ ಮುಂದಿನ ಯೋಜನೆಗಳನ್ನು ಒಳಗೊಂಡ ಶಾಲಾ ಮಾಹಿತಿ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು.

> ಶಾಲಾ ಸಂಸತ್ ವಿದ್ಯಾರ್ಥಿಗಳಲ್ಲಿ ನಾಯಕತ್ವ, ಜವಾಬ್ದಾರಿ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬೆಳೆಸುವ ಅತ್ಯುತ್ತಮ ವೇದಿಕೆ. ಇಂದಿನ ವಿದ್ಯಾರ್ಥಿಗಳೇ ನಾಳಿನ ದೇಶದ ನಾಯಕರಾಗಲಿದ್ದಾರೆ.
> **- ಡಾ. ವಿ.ಪಿ. ಪಾಟೀಲ,** ಉಪನ್ಯಾಸಕರು, ಎಸ್.ಕೆ.ವಿ.ಪಿ. ಪದವಿ ಮಹಾವಿದ್ಯಾಲಯ

ಕಾರ್ಯಕ್ರಮದಲ್ಲಿ ಆಡಳಿತಾಧಿಕಾರಿ ಕೆ.ಎಸ್. ಬಾರಕೇರ ಸ್ವಾಗತಿಸಿದರು. ಡಿ.ಆರ್. ನಾಯಕ, ಶಿವಾನಂದ ಹೂಗಾರ, ಬಿ.ಬಿ. ಬದಾಮಿ, ಎಸ್.ಎನ್. ಯಲಿಗಾರ, ಎಂ.ವಿ. ಮೆಣಸಗಿ, ವಿದ್ಯಾ ಬಿನ್ನಾಳ, ಎಂ.ಎಸ್. ನೈನಾಪೂರ ಶಿಕ್ಷಕರು, ಉಪಸ್ಥಿತರಿದ್ದರು. ಎಸ್.ಕೆ. ಆಡಿನ ಕಾರ್ಯಕ್ರಮ ನಿರೂಪಿಸಿದರು.

## ಸಂಕ್ಷಿಪ್ತ ಸುದ್ದಿಗಳು

### 19 ನಿಷ್ಕ್ರಿಯ ಸಹಕಾರ ಸಂಘಗಳ ನೋಂದಣಿ ರದ್ದತಿಗೆ ಕ್ರಮ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಕಾರ್ಯಾಚರಣೆ ಸ್ಥಗಿತಗೊಳಿಸಿ ನಿಷ್ಕ್ರಿಯವಾಗಿರುವ ಗದಗ ಜಿಲ್ಲೆಯ 19 ಸಹಕಾರ ಸಂಘಗಳ ನೋಂದಣಿಯನ್ನು ರದ್ದುಗೊಳಿಸಲು ಸಹಕಾರ ಸಂಘಗಳ ಉಪನಿಬಂಧಕರು ಕ್ರಮ ಕೈಗೊಂಡಿದ್ದಾರೆ.

ಸುಮಾರು 5ರಿಂದ 10 ವರ್ಷಗಳಿಂದ ಲೆಕ್ಕಪರಿಶೋಧನೆ ನಡೆಸದಿರುವುದು, ನಿಗದಿತ ಅವಧಿಯಲ್ಲಿ ಚುನಾವಣೆ ಮಾಡದಿರುವುದು, ವಾರ್ಷಿಕ ಮಹಾಸಭೆ ನಡೆಸದಿರುವುದು, ಆಡಳಿತ ಮಂಡಳಿ ಹಾಗೂ ಸದಸ್ಯರು ಸಂಘಗಳನ್ನು ಪುನಶ್ಚೇತನಗೊಳಿಸಲು ಆಸಕ್ತಿ ತೋರದಿರುವುದು, ಅಡಾವು ಪತ್ರಿಕೆಗಳು ಹಾಗೂ ಆಡಳಿತ ಮಂಡಳಿ ಸದಸ್ಯರ ವಿಳಾಸಗಳು ಲಭ್ಯವಿಲ್ಲದಿರುವ ಹಿನ್ನೆಲೆಯಲ್ಲಿ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಅನ್ವಯ ಈ ಕ್ರಮ ಜರುಗಿಸಲಾಗಿದೆ. ಹುಯಿಲಗೋಳದ ಹಾಲು ಉತ್ಪಾದಕರ ಸಹಕಾರ ಸಂಘ, ಗಜೇಂದ್ರಗಡದ ಎಸ್.ಎಂ. ಭೂಮರಡ್ಡಿ ಜೂನಿಯರ್ ಕಾಲೇಜ್ ಎಂಪ್ಲಾಯೀಸ್ ಕ್ರೆಡಿಟ್ ಕೋ-ಆಪ್ ಸೊಸೈಟಿ, ಸೂಡಿಯ ಗುರು ಮಹಾಂತೇಶ ಎಚ್.ಎಸ್. ಎಂಪ್ಲಾಯೀಸ್ ಕ್ರೆಡಿಟ್ ಕೋ-ಆಪ್ ಸೊಸೈಟಿ, ಸವಡಿಯ ಆಜಾದ್ ಅಲ್ಪಸಂಖ್ಯಾತರ ವಿವಿಧೋದ್ದೇಶ ಸಹಕಾರ ಸಂಘ, ಗಜೇಂದ್ರಗಡದ ಜೈಭೀಮ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿವಿಧೋದ್ದೇಶ ಸಹಕಾರ ಸಂಘ, ಅಬ್ಬಿಗೇರಿಯ ಬಸವೇಶ್ವರ ವಿವಿಧೋದ್ದೇಶ ಸಹಕಾರ ಸಂಘ, ಗಜೇಂದ್ರಗಡದ ದುರ್ಗಾಪ್ರಸಾದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿವಿಧೋದ್ದೇಶ ಸಹಕಾರ ಸಂಘ, ಗಜೇಂದ್ರಗಡ ವಿದ್ಯಾವರ್ಧಕ ವಸಾಹತುಗಾರರ ಕಂಜ್ಯೂಮರ್ಸ್ ಕೋ-ಆಪ್ ಸೊಸೈಟಿ, ಯಾವಗಲ್‌ನ ಡಾ. ಅಂಬೇಡ್ಕರ್ ಏತ ನೀರಾವರಿ ಸಹಕಾರ ಸಂಘ, ಬೆಳವಣಕಿಯ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ, ಸೃಜನಶೀಲ ಕೋ-ಆಪ್ ಕ್ರೆಡಿಟ್ ಸೊಸೈಟಿ ಹಾಗೂ ಶ್ರೀ ಬಸವೇಶ್ವರ ಕೋ-ಆಪ್ ಕ್ರೆಡಿಟ್ ಸೊಸೈಟಿ, ನರೇಗಲ್ಲದ ಶ್ರೀ ಅನ್ನದಾನೇಶ್ವರ ವಿದ್ಯಾವರ್ಧಕ ವಸಾಹತುಗಾರರ ಕಂಜ್ಯೂಮರ್ಸ್ ಕೋ-ಆಪ್ ಸೊಸೈಟಿ, ಹಿರೇಮಣ್ಣೂರ ವಿರ್ಸ್ ಅಂಡ್ ಪ್ರೊಡ್ಯೂಸ್ ಕೋ-ಆಪ್ ಸೊಸೈಟಿ, ಗಜೇಂದ್ರಗಡದ ನೇತ್ರಾವತಿ ಪತ್ತಿನ ಮಹಿಳಾ ಸಹಕಾರ ಸಂಘ, ಹೊನ್ನಿಗನೂರದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ, ಶಿರಹಟ್ಟಿಯ ಭಾರತ ಕೋ-ಆಪ್ ಕ್ರೆಡಿಟ್ ಸೊಸೈಟಿ, ಲಕ್ಷ್ಮೇಶ್ವರದ ಶ್ರೀ ಲಿಂಗರಾಜ ಪತ್ತಿನ ಸಹಕಾರ ಸಂಘ, ನರಸಾಪುರದ ಅಯ್ಯಪ್ಪಸ್ವಾಮಿ ವಿವಿಧೋದ್ದೇಶ ಸಹಕಾರ ಸಂಘ ಹಾಗೂ ಗದಗದ ಅಲ್ ಇತ್ತಿಹಾದ್ ಕೋ-ಆಪ್ ಕ್ರೆಡಿಟ್ ಸೊಸೈಟಿಗಳ ನೋಂದಣಿ ರದ್ದುಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಈ ಸಂಘಗಳಲ್ಲಿ ಠೇವಣಿ ಇಟ್ಟವರು, ಪಿಗ್ಮಿ ಮಾಡಿದವರು ಅಥವಾ ಹಣ ಪಡೆಯಬೇಕಿರುವ ಸದಸ್ಯರು ಪ್ರಕಟಣೆ ಹೊರಬಿದ್ದ ದಿನದಿಂದ 7 ದಿನಗಳೊಳಗೆ ಮೂಲ ದಾಖಲೆಗಳೊಂದಿಗೆ ಜಿಲ್ಲಾಡಳಿತ ಭವನದ ಕೊಠಡಿ ಸಂಖ್ಯೆ-125ರಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಕಾರ ಸಂಘಗಳ ಉಪನಿಬಂಧಕರ ಕಚೇರಿಯನ್ನು ಸಂಪರ್ಕಿಸುವಂತೆ ಸೂಚಿಸಲಾಗಿದೆ.

ನಿಗದಿತ ಅವಧಿಯಲ್ಲಿ ಯಾರೂ ಸಂಪರ್ಕಿಸದಿದ್ದರೆ ಸಂಬಂಧಪಟ್ಟ ಸಹಕಾರ ಸಂಘಗಳ ನೋಂದಣಿ ರದ್ದುಗೊಳಿಸಲಾಗುವುದು. ನಂತರ ಉದ್ಭವಿಸುವ ಯಾವುದೇ ಹೊಣೆಗಾರಿಕೆಗೆ ಇಲಾಖೆ ಜವಾಬ್ದಾರಿಯಾಗುವುದಿಲ್ಲ ಎಂದು ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಂಗಾಯಣದಲ್ಲಿ ನಾಳೆ ನಂಗೇಲಿ ನಾಟಕ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಂಗಾಯಣ, ಧಾರವಾಡ ವತಿಯಿಂದ ಜುಲೈ 18ರಂದು ಸಂಜೆ 5.30ಕ್ಕೆ ರಂಗಾಯಣದ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ಸಭಾಭವನದಲ್ಲಿ ನಂಗೇಲಿಟ (ಇದು ಬಲಿದಾನದ ಕಥೆ) ನಾಟಕ ಪ್ರದರ್ಶನ ನಡೆಯಲಿದೆ.

ಸುಧಾ ಅಡುಕಳ ಅವರ ಮೂಲ ಕಥೆಯನ್ನು ಆಧರಿಸಿ ಪ್ರಶಾಂತ್ ಶೆಟ್ಟಿ ರಚನೆ, ವಿನ್ಯಾಸ ಹಾಗೂ ನಿರ್ದೇಶನ ಮಾಡಿರುವ ಈ ನಾಟಕವನ್ನು ಬೆಂಗಳೂರು ಕಿನಾರೆ ಕಲಾಕೇಂದ್ರ ಪ್ರಸ್ತುತಪಡಿಸಲಿದೆ. ಕಾರ್ಯಕ್ರಮದಲ್ಲಿ ರಂಗಾಯಣದ ನಿರ್ದೇಶಕ ಝುಕೀರ ನದಾಫ ಉಪಸ್ಥಿತರಿರುವರು.

ನಾಟಕ ವೀಕ್ಷಣೆಗೆ ₹50 ಪ್ರವೇಶ ದರ ನಿಗದಿಪಡಿಸಲಾಗಿದ್ದು, ಸಾಹಿತ್ಯಾಸಕ್ತರು, ರಂಗಾಸಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ರಂಗಾಯಣದ ಆಡಳಿತಾಧಿಕಾರಿ ಶಶಿಕಲಾ ಹುಡೇದ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

### ಕುಂದ್ರಳ್ಳಿಯಲ್ಲಿ ಸಿಸಿ ರಸ್ತೆಗೆ ಶಾಸಕ ಡಾ. ಚಂದ್ರು ಲಮಾಣಿ ಭೂಮಿಪೂಜೆ

# ₹80 ಲಕ್ಷ ವೆಚ್ಚದ ರಸ್ತೆ ಕಾಮಗಾರಿಗೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಕುಂದ್ರಳ್ಳಿ ಗ್ರಾಮದಲ್ಲಿ ಮುಖ್ಯಮಂತ್ರಿಗಳ ಮೂಲಸೌಲಭ್ಯ ಅಭಿವೃದ್ಧಿ ಯೋಜನೆ (ಸಿಎಂಐಡಿಪಿ) ಅಡಿಯಲ್ಲಿ ₹80 ಲಕ್ಷ ವೆಚ್ಚದಲ್ಲಿ ಅಡರಕಟ್ಟಿಕುಂದ್ರಳ್ಳಿನಾದಿಗಟ್ಟಿ ಜಿಲ್ಲಾ ಮುಖ್ಯ ರಸ್ತೆಯ ಆಯ್ದ ಭಾಗದಲ್ಲಿ ನಿರ್ಮಾಣವಾಗಲಿರುವ ಸಿಸಿ ರಸ್ತೆ ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಭೂಮಿಪೂಜೆ ನೆರವೇರಿಸಿದರು.

ಭೂಮಿಪೂಜೆ ಬಳಿಕ ಮಾತನಾಡಿದ ಅವರು, ಶಾಸಕನಾದ ಬಳಿಕ ತಾಲೂಕಿನ ಹದಗೆಟ್ಟ ರಸ್ತೆಗಳನ್ನು ಅಭಿವೃದ್ಧಿಪಡಿಸಲು ವಿವಿಧ ಯೋಜನೆಗಳಡಿ ಅನುದಾನ ತಂದು ಹಲವು ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ವಿರೋಧ ಪಕ್ಷದ ಸರ್ಕಾರವಿದ್ದರೂ ಕ್ಷೇತ್ರದ ಅಭಿವೃದ್ಧಿಗೆ ಯಾವುದೇ ಕೊರತೆಯಾಗದಂತೆ ಪ್ರಯತ್ನಿಸುತ್ತಿದ್ದೇನೆ ಎಂದು ಹೇಳಿದರು.

ಬಟ್ಟೂರಕುಂದ್ರಳ್ಳಿ ಸಂಪರ್ಕ ರಸ್ತೆ ಹಲವು ವರ್ಷಗಳಿಂದ ಹದಗೆಟ್ಟಿದ್ದು, ಸಾರ್ವಜನಿಕರ ಬಹುದಿನಗಳ ಬೇಡಿಕೆಗೆ ಇದೀಗ ಸ್ಪಂದಿಸಲಾಗಿದೆ. ಅಡರಕಟ್ಟಿಕುಂದ್ರಳ್ಳಿನಾದಿಗಟ್ಟಿ ಜಿಲ್ಲಾ ಮುಖ್ಯ ರಸ್ತೆಯು ಗದಗ, ಹೊಸಪೇಟೆ ಸೇರಿದಂತೆ ವಿವಿಧ ಭಾಗಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆಯಾಗಿದ್ದು, ಕಾಮಗಾರಿ ಪೂರ್ಣಗೊಂಡರೆ ಸಾರ್ವಜನಿಕರ ಸಂಚಾರಕ್ಕೆ ಅನುಕೂಲವಾಗಲಿದೆ ಎಂದರು.

ಕ್ಷೇತ್ರದ ಹಲವು ರಸ್ತೆಗಳು ಇನ್ನೂ ಅಭಿವೃದ್ಧಿ ನಿರೀಕ್ಷೆಯಲ್ಲಿದ್ದು, ಹಿಂದುಳಿದ ಪ್ರದೇಶವಾಗಿರುವ ಹಿನ್ನೆಲೆಯಲ್ಲಿ ಗ್ರಾಮೀಣ ರಸ್ತೆ ಅಭಿವೃದ್ಧಿಗೆ ವಿಶೇಷ ಅನುದಾನ ನೀಡುವಂತೆ ಮುಖ್ಯಮಂತ್ರಿ ಹಾಗೂ ಲೋಕೋಪಯೋಗಿ ಸಚಿವರಿಗೆ ಮನವಿ ಮಾಡಿರುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ನೀಲವ್ವ ಕಳಸದ, ಉಪಾಧ್ಯಕ್ಷೆ ಮಲ್ಲವ್ವ ತಳವಾರ, ಮಂಜುನಾಥ ಗೌರಿ, ಮಂಜಪ್ಪ ಕಳಸದ, ಗಂಗಾಧರ ಮೆಣಸಿನಕಾಯಿ, ಕಲ್ಲಪ್ಪ ಹಡಪದ, ಶಂಕರ ಲಮಾಣಿ, ಈಶ್ವರ ಲಮಾಣಿ, ರುದ್ರಯ್ಯ ಶಿಲವಂತಮಠ, ಸುರೇಶ ಲಮಾಣಿ, ಬಸವರಾಜ ಲಮಾಣಿ, ಬಸನಗೌಡ ಪಾಟೀಲ, ಹಾಲಪ್ಪ ಹಂಗನಕಟ್ಟಿ, ಅಭಿವೃದ್ಧಿ ಅಧಿಕಾರಿ ಹನಮಂತಪ್ಪ ಲಮಾಣಿ, ಲೋಕೋಪಯೋಗಿ ಇಲಾಖೆ ಇಂಜಿನಿಯರ್ ಮಲ್ಲಿಕಾರ್ಜುನ ಮೇತ್ರಿ, ಗುತ್ತಿಗೆದಾರ ರಾಜು ಅಂಗಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ನನ್ನ ಅಧಿಕಾರಾವಧಿಯಲ್ಲಿ ತಾಲೂಕಿನ ಪ್ರಮುಖ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಗುರಿ ಹೊಂದಿದ್ದೇನೆ. ಹಿಂದುಳಿದ ಗ್ರಾಮೀಣ ಪ್ರದೇಶಗಳ ರಸ್ತೆ ಅಭಿವೃದ್ಧಿಗೆ ಸರ್ಕಾರ ಇನ್ನಷ್ಟು ವಿಶೇಷ ಅನುದಾನ ನೀಡಬೇಕು.
> – **ಡಾ. ಚಂದ್ರು ಲಮಾಣಿ**, ಶಾಸಕ

### ಜನಜಾಗೃತಿ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಸಂದೇಶ

# ಯಶಸ್ವಿ ಬದುಕಿಗೆ ವಿದ್ಯೆ, ದುಡಿಮೆ, ತಾಳ್ಮೆಯೇ ಆಧಾರ



**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮನುಷ್ಯನ ವ್ಯಕ್ತಿತ್ವಕ್ಕೆ ನಿಜವಾದ ಮೌಲ್ಯ ತಂದುಕೊಡುವುದು ಉತ್ತಮ ನಡೆ-ನುಡಿ. ಬದುಕಿನಲ್ಲಿ ಯಶಸ್ಸು ಸಾಧಿಸಬೇಕಾದರೆ ವಿದ್ಯೆ, ದುಡಿಮೆ ಮತ್ತು ತಾಳ್ಮೆ ಎಂಬ ಮೂರು ಆದರ್ಶ ಗುಣಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯರು ಹೇಳಿದರು.

ವಿಜಯನಗರದ ಶ್ರೀ ಬಸವೇಶ್ವರ ಸುಜ್ಞಾನ ಮಂಟಪದಲ್ಲಿ ಬುಧವಾರ ನಡೆದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಜ್ಞಾನದಿಂದ ಅಧಿಕಾರ ಸಿಗಬಹುದು. ಆದರೆ ಗೌರವ ಸಿಗಬೇಕಾದರೆ ಉತ್ತಮ ವ್ಯಕ್ತಿತ್ವ ಇರಬೇಕು. ಯಾರೊಬ್ಬರೂ ಪ್ರಶಂಸಿಸದಿದ್ದರೂ ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ಮಾಡುತ್ತಿರಬೇಕು. ವೀರಶೈವ ಧರ್ಮವು ಕ್ರಿಯಾಶೀಲ ಬದುಕಿಗೆ ಮಹತ್ವ ನೀಡಿದ್ದು, ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಶ್ವಬಂಧುತ್ವದ ಸಂದೇಶ ಇಂದಿಗೂ ಪ್ರಸ್ತುತವಾಗಿದೆ ಎಂದು ಹೇಳಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ, ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವೀರಶೈವ-ಲಿಂಗಾಯತ ಧರ್ಮವು ಸಕಲ ಜೀವಿಗಳ ಒಳಿತನ್ನು ಬಯಸುವ ಧರ್ಮವಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವಸಿದ್ಧಾಂತಗಳು ಹಾಗೂ ಬಸವಣ್ಣನವರ ಸಾಮಾಜಿಕ ಚಿಂತನೆಗಳು ಮಾನವ ಬದುಕಿಗೆ ದಾರಿದೀಪವಾಗಿವೆ ಎಂದು ಹೇಳಿದರು.

ವಿಭೂತಿಪುರ ಮಠದ ಡಾ. ಮಹಾಂತಲಿಂಗ ಶಿವಾಚಾರ್ಯರು ವೀರಶೈವ ಧರ್ಮ, ಸಂಸ್ಕೃತಿ ಮತ್ತು ಪರಂಪರೆ ಕುರಿತು ಉಪನ್ಯಾಸ ನೀಡಿದರು. ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು ಮಾತನಾಡಿ, ಶಿವ ಮತ್ತು ಗುರುವಿನಲ್ಲಿ ಬೇಧವಿಲ್ಲ. ಅಜ್ಞಾನ ನಿವಾರಣೆಗೆ ಗುರು ಅತ್ಯಗತ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಿ.ಎಸ್. ಪರಮಶಿವಯ್ಯ, ಬಿ.ಆರ್. ಹಿರೇಮಠ, ಗುರುಸ್ವಾಮಿ, ಎಸ್. ರಾಜಶೇಖರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಎಸ್.ಆರ್. ವೀರಭದ್ರಯ್ಯ, ಅಶೋಕ ನವಲಗುಂದ, ಹೆಚ್.ವಿ. ಅನುಪಮ, ಹೆಚ್.ವಿ. ನಾಗರಾಜ್ ಅವರಿಗೆ ಗುರುರಕ್ಷೆ ನೆರವೇರಿಸಲಾಯಿತು. ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯರು, ರಾಜಾಪೂರ ರಾಜೇಶ್ವರ ಶಿವಾಚಾರ್ಯರು, ಸಂಗೊಳ್ಳಿಯ ಗುರುಲಿಂಗ ಶಿವಾಚಾರ್ಯರು ಹಾಗೂ ಯಸಳೂರಿನ ಚನ್ನಸಿದ್ಧೇಶ್ವರ ಶಿವಾಚಾರ್ಯರು ಉಪಸ್ಥಿತರಿದ್ದರು.

ಶಿವಶಂಕರ ಶಾಸ್ತ್ರಿ ಮತ್ತು ತಂಡದಿಂದ ಭಕ್ತಿಗೀತೆ, ಎಸ್‌ಜೆಎಂ ಮಹಿಳಾ ಪದವಿ ಮಹಾವಿದ್ಯಾಲಯದ ವಿದ್ಯಾರ್ಥಿನಿಯರಿಂದ ಭರತನಾಟ್ಯ ಪ್ರದರ್ಶನ ನಡೆಯಿತು. ಪೂಜಾ ಸಮಿತಿ ಅಧ್ಯಕ್ಷ ಉಮಾಶಂಕರ್ ಸ್ವಾಗತಿಸಿದರು. ಸುಂಕದಕಟ್ಟೆ ಎಂ. ಮಹೇಶ್ ಕಾರ್ಯಕ್ರಮ ನಿರೂಪಿಸಿದರು. ಬಳಿಕ ಪ್ರಸಾದ ವಿನಿಯೋಗ ನಡೆಯಿತು.

> ಜ್ಞಾನದಿಂದ ಅಧಿಕಾರ ಸಿಗಬಹುದು; ಆದರೆ ಗೌರವ ಪಡೆಯಬೇಕಾದರೆ ಉತ್ತಮ ವ್ಯಕ್ತಿತ್ವ, ದುಡಿಮೆ ಮತ್ತು ತಾಳ್ಮೆ ಅಗತ್ಯ. ಡಾ. ವೀರಸೋಮೇಶ್ವರ ಶಿವಾಚಾರ್ಯರು.
> – **ಶ್ರೀ ರಂಭಾಪುರಿ ಜಗದ್ಗುರುಗಳು**

### ನಿವೃತ್ತ ಯೋಧರಿಂದ ವೀರ ಯೋಧರಿಗೆ ನಮನ; ಸಮವಸ್ತ್ರದಲ್ಲಿ ಭಾಗವಹಿಸಲು ಕರೆ

# ಜು.26ರಂದು ನರೇಗಲ್ಲದಲ್ಲಿ ಕಾರ್ಗಿಲ್ ವಿಜಯೋತ್ಸವ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕಾರ್ಗಿಲ್ ವಿಜಯೋತ್ಸವದ ಅಂಗವಾಗಿ ಜುಲೈ 26ರಂದು ನರೇಗಲ್ಲದಲ್ಲಿ ನಿವೃತ್ತ ಸೈನಿಕರ ಸಂಘದ ವತಿಯಿಂದ ವಿಜಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ತಿಳಿಸಿದರು.

ಪಟ್ಟಣದ ನಿವೃತ್ತ ಸೈನಿಕರ ಸಂಘದ ಕಚೇರಿಯಲ್ಲಿ ಬುಧವಾರ ನಡೆದ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಾರ್ಗಿಲ್ ಯುದ್ಧದಲ್ಲಿ ದೇಶ ರಕ್ಷಣೆಗಾಗಿ ಪ್ರಾಣಾರ್ಪಣೆ ಮಾಡಿದ ವೀರಯೋಧರ ತ್ಯಾಗವನ್ನು ಸ್ಮರಿಸುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯವಾಗಿದೆ. ಎಲ್ಲ ನಿವೃತ್ತ ಸೈನಿಕರು ಸಮವಸ್ತ್ರದಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರಗು ತರಬೇಕು ಎಂದು ಮನವಿ ಮಾಡಿದರು.

ಕಾರ್ಗಿಲ್ ಯುದ್ಧದ ಸಂದರ್ಭದಲ್ಲಿ ಪಾಕಿಸ್ತಾನದ ಒಳನುಸುಳುವಿಕೆ ಯತ್ನವನ್ನು ಭಾರತೀಯ ಸೈನಿಕರು ಧೈರ್ಯದಿಂದ ಹಿಮ್ಮೆಟ್ಟಿಸಿ ದೇಶದ ಗಡಿಯನ್ನು ರಕ್ಷಿಸಿದ ಸಾಹಸವನ್ನು ಸ್ಮರಿಸಿದ ಅವರು, ಅಂದಿನ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ನಾಯಕತ್ವ ಹಾಗೂ ಯೋಧರ ಶೌರ್ಯ ದೇಶದ ಇತಿಹಾಸದಲ್ಲಿ ಅಜರಾಮರವಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಇತ್ತೀಚೆಗೆ ನಿಧನರಾದ ಮೇಜರ್ ರಾಮಣ್ಣ ಸಕ್ರೋಜಿ ಹಾಗೂ ಸಂಘದ ಸದಸ್ಯ ದಾವಲಸಾಬ ಕಿಲ್ಲೇದಾರ ಅವರ ತಾಯಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಸದಸ್ಯರು ಅಗಲಿದವರ ಸೇವೆಯನ್ನು ಸ್ಮರಿಸಿ ನುಡಿನಮನ ಸಲ್ಲಿಸಿದರು.

ಗಾಂಧಿ ಭವನ ಅಭಿವೃದ್ಧಿಗೆ ಪಟ್ಟಣ ಪಂಚಾಯಿತಿ ₹3.50 ಲಕ್ಷ ಅನುದಾನ ಮಂಜೂರು ಮಾಡಿರುವುದಕ್ಕೆ ಸಭೆಯಲ್ಲಿ ಕೃತಜ್ಞತೆ ಸಲ್ಲಿಸಲಾಯಿತು. ಚಂದ್ರಶೇಖರ ಹರ್ತಿ ಅವರು ₹16,400 ಮೌಲ್ಯದ ಪಿಎ ವ್ಯವಸ್ಥೆ ಕೊಡುಗೆಯಾಗಿ ನೀಡಿದ್ದಕ್ಕಾಗಿ ಅವರನ್ನು ಅಭಿನಂದಿಸಲಾಯಿತು. ಮೇಜರ್ ರಾಮಣ್ಣ ಸಕ್ರೋಜಿ ಅವರ ನಿಧನದಿಂದ ತೆರವಾದ ಗೌರವಾಧ್ಯಕ್ಷ ಸ್ಥಾನಕ್ಕೆ ಶರಣಪ್ಪ ನಾಶಿಪುಡಿ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಹೊಸ ಸದಸ್ಯ ಆನಂದ ರಾಚನಗೌಡರ ಅವರನ್ನು ಸಂಘಕ್ಕೆ ಬರಮಾಡಿಕೊಳ್ಳಲಾಯಿತು.

ಸಭೆಯಲ್ಲಿ ಶಿವಪ್ಪ ಶಿವಾಪುರ, ಸಂಗಪ್ಪ ಕುಷ್ಟಗಿ, ರಾಮಪ್ಪ ರೋಣದ, ಕುಮಾರಸ್ವಾಮಿ ಕೋರಧಾನ್ಯಮಠ, ಪ್ರಭುದೇವ ಮುಕ್ಕನಗೌಡ್ರ, ಮಂದಾಲಪ್ಪ ಸಂಗನಾಳ, ಗುರುಶಾಂತಗೌಡ ಮಲ್ಲನಗೌಡ್ರ, ಸಿದ್ರಾಮಪ್ಪ ಕಟ್ಟಿಮನಿ, ಮಲ್ಲಪ್ಪ ಕಡೆತೋಟದ, ಉಮೇಶ ಕರಮುಡಿ, ಈರಪ್ಪ ದೊಡ್ಡಣ್ಣವರ, ಶಿವಾನಂದ ಬಂಡಿಹಾಳ, ಬಸವೇಶ್ವರ ಚಿಕ್ಕೊಪ್ಪದ, ಈಶ್ವರಚಂದ್ರ ಬಾಗಲಿ, ಬಸವರಾಜ ಯಕ್ಕುಂಡಿ, ಸುಮಿತ್ರಾ ದಳವಾಯಿ, ಬಸವರಾಜ ಕಡೆತೋಟದ, ಇಮಾಮಸಾಬ ಕೋಲಕಾರ, ಮಲ್ಲಮ್ಮ ಭೈರಗೊಂಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಕಾರ್ಗಿಲ್ ವಿಜಯೋತ್ಸವವು ದೇಶಭಕ್ತಿಯ ಸಂಕೇತ. ಯುವ ಪೀಳಿಗೆಗೆ ಯೋಧರ ತ್ಯಾಗದ ಅರಿವು ಮೂಡಿಸಲು ಎಲ್ಲ ನಿವೃತ್ತ ಸೈನಿಕರು ಸಮವಸ್ತ್ರದಲ್ಲಿ ಭಾಗವಹಿಸಬೇಕು.
> – **ಶಿವಪುತ್ರಪ್ಪ ಸಂಗನಾಳ,** ಅಧ್ಯಕ್ಷರು, ನಿವೃತ್ತ ಸೈನಿಕರ ಸಂಘ

### ಜು.19ರವರೆಗೆ ಉಚಿತ ಸಸಿ ವಿತರಣೆ; ನೆಟ್ಟು ಪೋಷಿಸುವಂತೆ ಸಾರ್ವಜನಿಕರಿಗೆ ಮನವಿ

# ಸಸಿ ಕೊಟ್ಟು ಹಸಿರು ಕ್ರಾಂತಿಗೆ ರೋಟರಿ ಮುನ್ನುಡಿ




**ವಿಜಯಸಾಕ್ಷಿ ಸುದ್ದಿ, ಗದಗ**

ಪರಿಸರ ಸಂರಕ್ಷಣೆಯ ಸಂದೇಶವನ್ನು ಜನಸಾಮಾನ್ಯರಿಗೆ ತಲುಪಿಸುವ ಉದ್ದೇಶದಿಂದ ಗದಗ-ಬೆಟಗೇರಿ ರೋಟರಿ ಕ್ಲಬ್ ವತಿಯಿಂದ ಒಬ್ಬ ರೋಟೇರಿಯನ್‌ಒಂದು ಮರಟಿ ಅಭಿಯಾನದಡಿ ಉಚಿತ ಸಸಿ ವಿತರಣೆಗೆ ಬುಧವಾರ ಚಾಲನೆ ನೀಡಲಾಯಿತು.

ನಗರದ ಜಿಲ್ಲಾ ಕ್ರೀಡಾಂಗಣ ಎದುರಿನ ಶ್ರೀಮತಿ ಉಷಾದೇವಿ ಜಿ. ಕುಷ್ಟಗಿ ರೋಟರಿ ಕಮ್ಯುನಿಟಿ ಕೇರ್ ಸೆಂಟರ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅಭಿಯಾನದ ಇವೆಂಟ್ ಚೇರ್‌ಮನ್ ಸುರೇಶ ಕುಂಬಾರ, ಇದು ಕೇವಲ ಸಸಿ ವಿತರಣೆಯಲ್ಲ, ಮುಂದಿನ ಪೀಳಿಗೆಗಾಗಿ ಹಸಿರು ಪರಂಪರೆ ನಿರ್ಮಿಸುವ ಜನಾಂದೋಲನವಾಗಿದೆ ಎಂದು ಹೇಳಿದರು.

ಈ ಬಾರಿ ವಿತರಿಸಲಾಗುತ್ತಿರುವ ಸಸಿಗಳಿಗೆ ಕ್ಯೂಆರ್ ಕೋಡ್ ಅಳವಡಿಸಲಾಗಿದ್ದು, ಟ್ರೀ ಗಾರ್ಡಿಯನ್ ತಂಡವು ಪ್ರತಿ ಮೂರು ತಿಂಗಳಿಗೊಮ್ಮೆ ಸಸಿಗಳ ಬೆಳವಣಿಗೆಯನ್ನು ಪರಿಶೀಲಿಸಲಿದೆ. ಸಸಿ ನೆಡುವುದಷ್ಟೇ ಅಲ್ಲ, ಅವುಗಳನ್ನು ಮಗುವಿನಂತೆ ಪೋಷಿಸಿ ಬೆಳೆಸುವ ಜವಾಬ್ದಾರಿಯೂ ಸಾರ್ವಜನಿಕರ ಮೇಲಿದೆ ಎಂದು ತಿಳಿಸಿದರು.

ಸಸಿ ವಿತರಣೆಯ ಪ್ರಾಯೋಜಕರಾದ ನವೀನ ಕುಷ್ಟಗಿ ಹಾಗೂ ನಾಗೇಶ ಹಂಜಗಿ, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸಸಿ ಪಡೆದು ನೆಟ್ಟು, ಪರಿಸರ ಸಂರಕ್ಷಣೆಯ ಅಭಿಯಾನಕ್ಕೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ ವಹಿಸಿದ್ದರು. ಕಾರ್ಯದರ್ಶಿ ಅಕ್ಷಯ್ ಶೆಟ್ಟಿ ಸ್ವಾಗತಿಸಿ ವಂದಿಸಿದರು. ಡಾ. ಆರ್.ಬಿ. ಉಪ್ಪಿನ, ವಿಶ್ವನಾಥ ಯಳಮಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಸಸಿ ಪಡೆದು ನೆಡುವುದಷ್ಟೇ ಸಾಲದು, ಅದನ್ನು ಪೋಷಿಸಿ ಮರವಾಗಿ ಬೆಳೆಸಿದಾಗಲೇ ಪರಿಸರ ಸಂರಕ್ಷಣೆಯ ಅಭಿಯಾನ ಸಾರ್ಥಕವಾಗುತ್ತದೆ.
> – **ಸುರೇಶ ಕುಂಬಾರ,** ಇವೆಂಟ್ ಚೇರ್‌ಮನ್, ಒಬ್ಬ ರೋಟೇರಿಯನ್‌ಒಂದು ಮರಟಿ ಅಭಿಯಾನ

ಜುಲೈ 19ರವರೆಗೆ ಪ್ರತಿದಿನ ಬೆಳಿಗ್ಗೆ 10ರಿಂದ ಮಧ್ಯಾಹ್ನ 1 ಗಂಟೆ ಹಾಗೂ ಮಧ್ಯಾಹ್ನ 3ರಿಂದ ಸಂಜೆ 5 ಗಂಟೆಯವರೆಗೆ ರೋಟರಿ ಕಮ್ಯುನಿಟಿ ಕೇರ್ ಸೆಂಟರ್‌ನಲ್ಲಿ ಸಾರ್ವಜನಿಕರಿಗೆ ಹೊಂಗೆ, ಬೇವು, ಅರಳಿ, ನೇರಳೆ, ಸೀತಾಫಲ ಸೇರಿದಂತೆ ದೇಶೀ ತಳಿಯ ಸಸಿಗಳನ್ನು ಉಚಿತವಾಗಿ ವಿತರಿಸಲಾಗುತ್ತದೆ. ಸ್ಥಳದಲ್ಲೇ ತಜ್ಞರಿಂದ ಮಾರ್ಗದರ್ಶನವೂ ನೀಡಲಾಗುತ್ತದೆ.



**ಭಾರತೀಯ ಪ್ರಜೆ ಎಂಬಂತೆ ನಕಲಿ ದಾಖಲೆಗಳನ್ನು ಪಡೆದು ಹಲವು ವರ್ಷಗಳಿಂದ ವಾಸವಿದ್ದ ಬಾಂಗ್ಲಾದೇಶದ ಪ್ರಜೆಯೊಬ್ಬನಿಗೆ ಸಿಂಧನೂರು ನ್ಯಾಯಾಲಯ ಮೂರು ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ. ಪಾಸ್‌ಪೋರ್ಟ್ ಪಡೆದಿದ್ದರೂ ಇಮಿಗ್ರೇಷನ್ ಪರಿಶೀಲನೆಯ ವೇಳೆ ಸಿಕ್ಕಿಬಿದ್ದಿದ್ದ ಆರೋಪಿಗೆ ಇದೀಗ ಶಿಕ್ಷೆ ಪ್ರಕಟವಾಗಿದೆ.**

### ವಿಶ್ವ ಜನಸಂಖ್ಯಾ ದಿನಾಚರಣೆಯಲ್ಲಿ ಕುಟುಂಬ ಯೋಜನೆ, ತಾಯಿ-ಮಕ್ಕಳ ಆರೋಗ್ಯದ ಕುರಿತು ಜಾಗೃತಿ

# ಜನಸಂಖ್ಯೆ ನಿಯಂತ್ರಣವೇ ಆರೋಗ್ಯವಂತ ಸಮಾಜದ ಅಡಿಗಲ್ಲು



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹೆಚ್ಚುತ್ತಿರುವ ಜನಸಂಖ್ಯೆಯಿಂದ ಸಾಮಾಜಿಕ, ಆರ್ಥಿಕ ಹಾಗೂ ಪರಿಸರದ ಮೇಲೆ ಉಂಟಾಗುತ್ತಿರುವ ಒತ್ತಡವನ್ನು ನಿಯಂತ್ರಿಸಲು ಕುಟುಂಬ ಯೋಜನೆ ಮತ್ತು ಆರೋಗ್ಯಕರ ಜೀವನಶೈಲಿಯ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರಾಥಮಿಕ ಆರೋಗ್ಯ ಕೇಂದ್ರ, ನಿಡಗುಂದಿ, ನರೇಗಲ್ಲ ಪಟ್ಟಣ ಪಂಚಾಯತ್ ಹಾಗೂ ಆರೋಗ್ಯ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎ. ಹಾದಿಮನಿ, ಜನಸಂಖ್ಯೆ ಹೆಚ್ಚಳದಿಂದ ಎದುರಾಗುತ್ತಿರುವ ಸವಾಲುಗಳ ಬಗ್ಗೆ ವಿವರಿಸಿ, ಕುಟುಂಬ ಯೋಜನೆ, ತಾಯಿ ಮತ್ತು ಮಕ್ಕಳ ಆರೋಗ್ಯ, ಶಿಕ್ಷಣ ಹಾಗೂ ಮಹಿಳಾ ಸಬಲೀಕರಣದ ಮಹತ್ವವನ್ನು ಒತ್ತಿ ಹೇಳಿದರು.

ಜನಸಂಖ್ಯೆ ಮತ್ತು ಪರಿಸರದ ನಡುವೆ ಸಮತೋಲನ ಕಾಯ್ದುಕೊಳ್ಳುವುದು ಸುಸ್ಥಿರ ಅಭಿವೃದ್ಧಿಗೆ ಅತ್ಯಗತ್ಯವಾಗಿದೆ. ಆರೋಗ್ಯಕರ ಕುಟುಂಬ ನಿರ್ಮಾಣವಾದಾಗ ಮಾತ್ರ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ ಎಂದು ಅವರು ತಿಳಿಸಿದರು.

ಈ ವರ್ಷದ ಘೋಷವಾಕ್ಯವಾದ ಆರೋಗ್ಯಕರ ಸಮಯದಲ್ಲಿ ಗರ್ಭಧಾರಣೆ ಹಾಗೂ ಮಕ್ಕಳ ನಡುವೆ ಆರೋಗ್ಯಕರ ಅಂತರ ಕಾಪಾಡುವುದರಿಂದ ತಾಯಿ ಮತ್ತು ಮಕ್ಕಳ ಆರೋಗ್ಯ ವೃದ್ಧಿಯಾಗುತ್ತದೆ ಎಂಬ ಸಂದೇಶವನ್ನು ಕಾರ್ಯಕ್ರಮದಲ್ಲಿ ಪ್ರಮುಖವಾಗಿ ಬಿಂಬಿಸಲಾಯಿತು.

ತಾಯಿ ಮತ್ತು ಮಗುವಿನ ಆರೋಗ್ಯ ರಕ್ಷಣೆಗಾಗಿ ಕುಟುಂಬ ಯೋಜನೆ ಕುರಿತು ಸಾರ್ವಜನಿಕರು ಆರೋಗ್ಯ ಇಲಾಖೆಯ ಸೇವೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರೆ ನೀಡಲಾಯಿತು.

ಈ ಸಂದರ್ಭದಲ್ಲಿ ಮಂಜುನಾಥ ಜಾಲಿಹಾಳ, ಕೆ.ಎ. ಬೂದಿಹಾಳ, ರಮೇಶ್ ಹಲಗಿಯವರ, ಮಂಜುನಾಥ ಕೊಂಡಗುಳಿ, ಪೂರ್ಣಿಮಾ ಹೊಸಮನಿ, ರೇಣುಕಾ ಕಳಕಣ್ಣವರ, ರಾಜೇಶ್ವರಿ ಶಿರಶ್ಯಾಡ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಪೌರ ಕಾರ್ಮಿಕರಿಗೆ ಆರೋಗ್ಯ ಶಿಕ್ಷಣ

ಕಾರ್ಯಕ್ರಮದಲ್ಲಿ ನರೇಗಲ್ಲ ಪಟ್ಟಣ ಪಂಚಾಯತ್‌ನ ಪೌರ ಕಾರ್ಮಿಕರಿಗೆ ಆರೋಗ್ಯ, ಸ್ವಚ್ಛತೆ ಹಾಗೂ ಕುಟುಂಬ ಯೋಜನೆ ಕುರಿತು ವಿಶೇಷ ಅರಿವು ಮೂಡಿಸಲಾಯಿತು.

## ಸಂಕ್ಷಿಪ್ತ ಸುದ್ದಿಗಳು

# ಹತ್ತಿ ಇಳುವರಿ ಹೆಚ್ಚಳಕ್ಕೆ ವೈಜ್ಞಾನಿಕ ಕೃಷಿ ಅಳವಡಿಸಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**
ಗುಣಮಟ್ಟದ ಹತ್ತಿ ಉತ್ಪಾದನೆಯೊಂದಿಗೆ ಇಳುವರಿ ಹೆಚ್ಚಿಸಲು ರೈತರು ಆಧುನಿಕ ಕೃಷಿ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಹೇಳಿದರು.

ತಾಲೂಕಿನ ಮಾಗಡಿ ಗ್ರಾಮದಲ್ಲಿ ರೈತ ಪರಪ್ಪ ನಾಗವಿ ಅವರ ಜಮೀನಿನಲ್ಲಿ ಕೃಷಿ ಇಲಾಖೆ ಆಯೋಜಿಸಿದ್ದ ಹತ್ತಿ ಉತ್ಪಾದಕತೆ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಹತ್ತಿ ಉತ್ಪಾದಕತೆ ಅಭಿಯಾನದ ಉದ್ದೇಶ, ಉತ್ತಮ ಗುಣಮಟ್ಟದ ಬೀಜಗಳ ಆಯ್ಕೆ, ಬೆಳೆ ನಿರ್ವಹಣೆ ಹಾಗೂ ವೈಜ್ಞಾನಿಕ ಕೃಷಿ ಪದ್ಧತಿಗಳ ಬಗ್ಗೆ ರೈತರಿಗೆ ಮಾಹಿತಿ ನೀಡಿದರು.

ಹತ್ತಿ ಬೆಳೆಯಲ್ಲಿ ಉತ್ಪಾದಕತೆ ಹೆಚ್ಚಿಸಲು ಮಣ್ಣಿನ ಆರೋಗ್ಯ ಕಾಪಾಡುವುದು, ಸಮತೋಲಿತ ಗೊಬ್ಬರ ಬಳಕೆ, ಕೀಟ-ರೋಗಗಳ ಸಮರ್ಪಕ ನಿರ್ವಹಣೆ ಹಾಗೂ ಶಿಫಾರಸು ಮಾಡಿದ ಕೃಷಿ ಕ್ರಮಗಳನ್ನು ಅನುಸರಿಸುವುದು ಅಗತ್ಯ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಉಪ ಕೃಷಿ ನಿರ್ದೇಶಕಿ ಜಿ.ಎಸ್. ಸ್ಫೂರ್ತಿ, ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ, ಯು.ಕೆ. ಶಾನವಾಡ, ನಾಗರಾಜ ಕುಲಕರ್ಣಿ, ವೀರಯ್ಯ ಮಠಪತಿ, ಎಂ.ಸಿ. ಮುಳಗುಂದ, ಬಸವರಾಜ ಪಲ್ಲೇದ, ವಿರುಪಾಕ್ಷಪ್ಪ ಕುಂಡಿ, ಮಂಜುನಾಥ ಭರಮಗೌಡ್ರ, ಆರ್.ಸಿ. ಚಾಕಲಬ್ಬಿ, ಎಂ.ಎಸ್. ಪೂಜಾರ, ಡಿ.ಕೆ. ಅಚಲಕರ ಸೇರಿದಂತೆ ರೈತರು ಉಪಸ್ಥಿತರಿದ್ದರು.

# ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಜನಸಂಖ್ಯೆ ನಿಯಂತ್ರಣ ಅಗತ್ಯ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**
ಆರೋಗ್ಯವಂತ ಸಮಾಜ ಹಾಗೂ ಉತ್ತಮ ಭವಿಷ್ಯ ನಿರ್ಮಾಣಕ್ಕೆ ಜನಸಂಖ್ಯೆ ನಿಯಂತ್ರಣ ಮತ್ತು ಕುಟುಂಬ ಯೋಜನೆ ಕುರಿತು ಪ್ರತಿಯೊಬ್ಬರೂ ಜಾಗೃತರಾಗಬೇಕು ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ಸುಭಾಸ್ ದೈಗೊಂಡ ಹೇಳಿದರು.

ತಾಲೂಕು ಆರೋಗ್ಯಾಧಿಕಾರಿ ಕಚೇರಿ ವತಿಯಿಂದ ಎಸ್.ಬಿ. ಪೂಜಾರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ವಿಶ್ವ ಜನಸಂಖ್ಯಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹೆಚ್ಚುತ್ತಿರುವ ಜನಸಂಖ್ಯೆಯಿಂದ ನೀರು, ಆಹಾರ ಹಾಗೂ ಇತರೆ ನೈಸರ್ಗಿಕ ಸಂಪನ್ಮೂಲಗಳ ಮೇಲೆ ಒತ್ತಡ ಹೆಚ್ಚುತ್ತಿದೆ. ಕುಟುಂಬದಲ್ಲಿ ಮಕ್ಕಳ ನಡುವೆ ಸುರಕ್ಷಿತ ಅಂತರ ಕಾಯ್ದುಕೊಳ್ಳುವುದರಿಂದ ತಾಯಿ ಮತ್ತು ಮಗುವಿನ ಆರೋಗ್ಯ ಸುಧಾರಿಸುವುದರ ಜೊತೆಗೆ ಮಕ್ಕಳಿಗೆ ಉತ್ತಮ ಶಿಕ್ಷಣ ಹಾಗೂ ಆರೈಕೆ ನೀಡಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಜನಸಂಖ್ಯೆ ನಿಯಂತ್ರಣವು ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಪ್ರತಿಯೊಬ್ಬ ನಾಗರಿಕನ ಸಾಮಾಜಿಕ ಹೊಣೆಗಾರಿಕೆಯೂ ಆಗಿದೆ. ಆರೋಗ್ಯಕರ ಕುಟುಂಬಗಳ ಮೂಲಕವೇ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯ ಬಿ.ಜಿ. ಗಿರಿತಮ್ಮಣ್ಣವರ ವಹಿಸಿದ್ದರು. ಎಸ್.ಎಫ್. ಹನಕನಹಳ್ಳಿ, ಗಿರೀಶ ರೆಡ್ಡಿ, ಲಿಂಗರಾಜ ಯತ್ನಳ್ಳಿ, ಪರಿಮಳ ಆರ್., ಕವಿತಾ ಮುಗಳಿ, ಗೋಪಾಲರಾಜ, ಪವನ ಫಾಯದೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪೊಲೀಸ್ ನೇಮಕಾತಿಗೆ ಅರ್ಜಿ ಸಲ್ಲಿಸಲು ತೆರಳಿದ್ದ ಯುವತಿ ನಾಪತ್ತೆ

**ವಿಜಯಸಾಕ್ಷಿ ಸುದ್ದಿ, ಧಾರವಾಡ**
ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿಗೆ ಅರ್ಜಿ ಸಲ್ಲಿಸಲು ಮನೆಯಿಂದ ತೆರಳಿದ್ದ 24 ವರ್ಷದ ಯುವತಿಯೊಬ್ಬಳು ನಾಪತ್ತೆಯಾಗಿರುವ ಘಟನೆ ಧಾರವಾಡದಲ್ಲಿ ನಡೆದಿದ್ದು, ಆಕೆಯ ಪತ್ತೆಗೆ ಧಾರವಾಡ ಉಪನಗರ ಪೊಲೀಸರು ಸಾರ್ವಜನಿಕರ ಸಹಕಾರ ಕೋರಿದ್ದಾರೆ.



ಧಾರವಾಡದ ಕೆಸಿಡಿ ಸರ್ಕಲ್ ಸಮೀಪದ ಪಿಡಬ್ಲ್ಯುಡಿ ಕ್ವಾರ್ಟರ್ಸ್ ನಿವಾಸಿ, ಸರ್ಕಾರಿ ನೌಕರ ರಾಜಣ್ಣ ರೇವಪ್ಪ ಲೋಣಿ ಅವರ ಪುತ್ರಿ ರೂಪಾ ರಾಜಣ್ಣ ಲೋಣಿ (24) ಜುಲೈ 13ರಂದು ಸಂಜೆ ಸುಮಾರು 4.45ಕ್ಕೆ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಅರ್ಜಿ ಸಲ್ಲಿಸಿ ಬರುತ್ತೇನೆ ಎಂದು ಹೇಳಿ ಮನೆಯಿಂದ ತೆರಳಿದ್ದರು. ಆದರೆ, ಬಳಿಕ ಮನೆಗೆ ವಾಪಸ್ಸಾಗದೆ ನಾಪತ್ತೆಯಾಗಿದ್ದಾರೆ.

ಕುಟುಂಬಸ್ಥರು ಸಂಬಂಧಿಕರು, ಸ್ನೇಹಿತರು ಹಾಗೂ ಪರಿಚಿತರ ಮನೆಗಳಲ್ಲಿ ಹುಡುಕಾಟ ನಡೆಸಿದರೂ ಯಾವುದೇ ಸುಳಿವು ಸಿಗದ ಹಿನ್ನೆಲೆಯಲ್ಲಿ ರಾಜಣ್ಣ ಲೋಣಿ ಅವರು ಧಾರವಾಡ ಉಪನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ದೂರಿನ ಮೇರೆಗೆ ಠಾಣೆಯಲ್ಲಿ ಅಪರಾಧ ಸಂಖ್ಯೆ 167/2026ರಡಿ ಮಹಿಳೆ ಕಾಣೆ ಪ್ರಕರಣ ದಾಖಲಿಸಿಕೊಂಡು ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಪೊಲೀಸರ ಮಾಹಿತಿ ಪ್ರಕಾರ, ರೂಪಾ ಸುಮಾರು 5 ಅಡಿ 3 ಇಂಚು ಎತ್ತರ, ಬೆಳ್ಳನೆಯ ಮೈಬಣ್ಣ, ದುಂಡು ಮುಖ, ನೀಟಾದ ಮೂಗು, ಕಪ್ಪು ಕೂದಲು ಹಾಗೂ ತೆಳುವಾದ ಮೈಕಟ್ಟು ಹೊಂದಿದ್ದಾರೆ. ಮನೆಯಿಂದ ಹೊರಡುವಾಗ ಗುಲಾಬಿ ಹಾಗೂ ಬಿಳಿ ಬಣ್ಣ ಮಿಶ್ರಿತ ಚೂಡಿದಾರ ಧರಿಸಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಯುವತಿ ಕುರಿತು ಯಾವುದೇ ಮಾಹಿತಿ ದೊರೆತಲ್ಲಿ ತಕ್ಷಣ ಹುಬ್ಬಳ್ಳಿಧಾರವಾಡ ಪೊಲೀಸ್ ಕಂಟ್ರೋಲ್ ರೂಮ್ (100 / 0836-2233555), ಧಾರವಾಡ ಉಪನಗರ ಪೊಲೀಸ್ ಠಾಣೆ (0836-2233511 / 9480802033) ಅಥವಾ ಕುಟುಂಬಸ್ಥರ ಮೊಬೈಲ್ ಸಂಖ್ಯೆ 9901951719ಗೆ ಮಾಹಿತಿ ನೀಡುವಂತೆ ಧಾರವಾಡ ಉಪನಗರ ಪೊಲೀಸರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

### ಸಂಸದ ರಾಜಶೇಖರ ಹಿಟ್ನಾಳರಿಗೆ ಗದಗ ಜಿಲ್ಲಾ ವಿಕಾಸ ವೇದಿಕೆ ಮನವಿ | ಗದಗವನ್ನು ಪ್ರಮುಖ ರೈಲು ಜಂಕ್ಷನ್ ಆಗಿ ಅಭಿವೃದ್ಧಿಪಡಿಸುವಂತೆ ಒತ್ತಾಯ

# ಗದಗ ಮಾರ್ಗಕ್ಕೆ ಇನ್ನಷ್ಟು ರೈಲು ಓಡಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**
ಬಳ್ಳಾರಿ-ಹೊಸಪೇಟೆ, ಕೊಪ್ಪಳ, ಗದಗ, ಹುಬ್ಬಳ್ಳಿ ಹಾಗೂ ಬಾಗಲಕೋಟೆ, ವಿಜಯಪುರ ಮಾರ್ಗಗಳಲ್ಲಿ ರೈಲುಗಳ ಸಂಖ್ಯೆ ತೀರಾ ಕಡಿಮೆಯಿರುವುದರಿಂದ ಈ ಭಾಗದ ಪ್ರಯಾಣಿಕರಿಗೆ ತೀವ್ರ ತೊಂದರೆಯಾಗುತ್ತಿದೆ. ಆದ್ದರಿಂದ ಈ ಮಾರ್ಗಗಳಲ್ಲಿ ಹೆಚ್ಚಿನ ಹೊಸ ರೈಲುಗಳನ್ನು ಆರಂಭಿಸುವಂತೆ ಕೊಪ್ಪಳ ಲೋಕಸಭಾ ಸದಸ್ಯ ರಾಜಶೇಖರ ಹಿಟ್ನಾಳ ಅವರಿಗೆ ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಮನವಿ ಸಲ್ಲಿಸಿದರು.



ಬಳ್ಳಾರಿಯಿಂದ ಹುಬ್ಬಳ್ಳಿ ಮಾರ್ಗಕ್ಕೆ ಮುಂಜಾನೆ ಕೆಲವೇ ರೈಲುಗಳಿದ್ದು, ಮಧ್ಯಾಹ್ನ ಹಾಗೂ ಸಂಜೆ ವೇಳೆಯಲ್ಲಿ ಪ್ರಯಾಣಿಕರಿಗೆ ಸೂಕ್ತ ರೈಲು ಸಂಪರ್ಕ ಇಲ್ಲದಿರುವುದು ವಿದ್ಯಾರ್ಥಿಗಳು, ವ್ಯಾಪಾರಸ್ಥರು, ಉದ್ಯಮಿಗಳು ಹಾಗೂ ಸಾರ್ವಜನಿಕರಿಗೆ ಸಮಸ್ಯೆಯಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಮಧ್ಯಂತರ ವೇಳೆಯಲ್ಲಿಯೂ ಹೊಸ ರೈಲುಗಳನ್ನು ಓಡಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಕುಷ್ಟಗಿ, ಗಂಗಾವತಿ ಹಾಗೂ ಸಿಂಧನೂರು ಭಾಗಕ್ಕೂ ರೈಲು ಸಂಚಾರದ ಕೊರತೆ ಇರುವುದರಿಂದ ಈ ಭಾಗಗಳಿಗೂ ಹೊಸ ರೈಲು ಸೇವೆ ಆರಂಭಿಸಬೇಕು ಎಂದು ಆಗ್ರಹಿಸಲಾಗಿದೆ.

ಬೆಂಗಳೂರು, ರಾಯದುರ್ಗ, ಬಳ್ಳಾರಿ, ಹೊಸ ಪೇಟೆ, ಕೊಪ್ಪಳ, ಗದಗ, ಹುಬ್ಬಳ್ಳಿ, ಬಾಗಲಕೋಟೆ, ವಿಜಯಪುರ ಮಾರ್ಗದಲ್ಲಿ ಹೊಸ ರೈಲುಗಳನ್ನು ಸಂಚರಿಸಿದರೆ ಪ್ರಯಾಣಿಕರಿಗೆ ಅನುಕೂಲವಾ ಗುವುದರ ಜೊತೆಗೆ ವ್ಯಾಪಾರ, ಪ್ರವಾಸೋದ್ಯಮ ಹಾಗೂ ಕೈಗಾರಿಕಾ ಬೆಳವಣಿಗೆಗೂ ಉತ್ತೇಜನ ಸಿಗಲಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಈಗಾಗಲೇ ಗದಗಸೊಲ್ಲಾಪುರ ರೈಲು ಮಾರ್ಗ ದ್ವಿಪಥವಾಗಿರುವ ಹಿನ್ನೆಲೆಯಲ್ಲಿ ಗದಗವನ್ನು ಪ್ರಮುಖ ರೈಲು ಜಂಕ್ಷನ್ ಆಗಿ ಅಭಿವೃದ್ಧಿಪಡಿಸಿ, ಮುಂಬೈ, ಪುಣೆ, ಅಹಮದಾಬಾದ್, ಜೈಪುರ, ದೆಹಲಿ, ಆಂಧ್ರಪ್ರದೇಶ ಹಾಗೂ ತಮಿಳುನಾಡು ಸೇರಿದಂತೆ ವಿವಿಧ ರಾಜ್ಯಗಳಿಗೆ ನೇರ ರೈಲು ಸಂಪರ್ಕ ಕಲ್ಪಿಸುವಂತೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಹಾಗೂ ರಾಜ್ಯ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರ ಗಮನಕ್ಕೆ ತರಬೇಕೆಂದು ಸಂಸದರಿಗೆ ಮನವಿ ಮಾಡಲಾಗಿದೆ.

> **ಬಳ್ಳಾರಿ-ಕೊಪ್ಪಳ-ಗದಗ-ಹುಬ್ಬಳ್ಳಿ ಮಾರ್ಗದಲ್ಲಿ ಹೊಸ ರೈಲುಗಳನ್ನು ಆರಂಭಿಸಿದರೆ ಈ ಭಾಗದ ಪ್ರಯಾಣಿಕರು, ವಿದ್ಯಾರ್ಥಿಗಳು ಹಾಗೂ ವ್ಯಾಪಾರ ವಹಿವಾಟಿಗೆ ಹೆಚ್ಚಿನ ಅನುಕೂಲವಾಗಲಿದೆ.**
> **- ವಿಶ್ವನಾಥ ಖಾನಾಪೂರ**

ಮನವಿ ಸಲ್ಲಿಸುವ ಸಂದರ್ಭದಲ್ಲಿ ಜಗದೀಶ ಕಂಗೂರಿ, ವೆಂಕಟೇಶ ಕಬಾಡಿ, ವೀರಭದ್ರಪ್ಪ ಕಬ್ಬಿಣದ, ಬಸವರಾಜ ಜರತಕನಿ, ರಜಾಕ್ ನೂರಭಾಷ ಸೇರಿದಂತೆ ಗದಗ ಜಿಲ್ಲಾ ವಿಕಾಸ ವೇದಿಕೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

### ಬೆಟಗೇರಿಯಲ್ಲಿ ವಿಶೇಷ ದಾಖಲಾತಿ ಆಂದೋಲನ | ಮನೆ ಮನೆಗೆ ತೆರಳಿ ಪಾಲಕರಲ್ಲಿ ಜಾಗೃತಿ

# ಶಾಲೆಯಿಂದ ಯಾವ ಮಗುವೂ ಹೊರಗುಳಿಯಬಾರದು



**ವಿಜಯಸಾಕ್ಷಿ ಸುದ್ದಿ, ಗದಗ**
ಪ್ರತಿಯೊಂದು ಮಗುವಿಗೂ ಶಿಕ್ಷಣದ ಹಕ್ಕು ದೊರೆಯಬೇಕು ಎಂಬ ಉದ್ದೇಶದಿಂದ ಬೆಟಗೇರಿಯಲ್ಲಿ ವಿಶೇಷ ದಾಖಲಾತಿ ಆಂದೋಲನಕ್ಕೆ ಚಾಲನೆ ನೀಡಲಾಗಿದ್ದು, ಪಾಲಕರು ತಮ್ಮ ಮಕ್ಕಳನ್ನು ಕಡ್ಡಾಯವಾಗಿ ಶಾಲೆಗೆ ದಾಖಲಿಸುವ ಮೂಲಕ ಅಭಿಯಾನಕ್ಕೆ ಕೈಜೋಡಿಸಬೇಕು ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಕರೆ ನೀಡಿದರು.

ಬೆಟಗೇರಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.1 ಹಾಗೂ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ನಂ.2ರ ಶಿಕ್ಷಕರು ಮತ್ತು ಸಮುದಾಯದ ಸದಸ್ಯರೊಂದಿಗೆ ಕಬಾಡಿ ಓಣಿ, ಮಜ್ಜಗಿ ಓಣಿ ಹಾಗೂ ಕಲ್ಮಠ ಓಣಿ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಮನೆ-ಮನೆಗೆ ತೆರಳಿ ವಿಶೇಷ ದಾಖಲಾತಿ ಆಂದೋಲನ ನಡೆಸಿ ಅವರು ಮಾತನಾಡಿದರು.

ವಿಶೇಷ ದಾಖಲಾತಿ ಆಂದೋಲನವು ಕೇವಲ ಮಕ್ಕಳ ದಾಖಲಾತಿಗೆ ಸೀಮಿತವಾಗಿಲ್ಲ. ಪ್ರತಿಯೊಬ್ಬ ಮಗುವಿಗೂ ಗುಣಮಟ್ಟದ ಶಿಕ್ಷಣ ಒದಗಿಸುವ ಸಾಮಾಜಿಕ ಬದ್ಧತೆಯಾಗಿದೆ. ಸಮುದಾಯದ ಸಹಭಾಗಿತ್ವದಿಂದ ಮಾತ್ರ ಯಾವುದೇ ಮಗು ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

> **ವಿಶೇಷ ದಾಖಲಾತಿ ಆಂದೋಲನವು ಕೇವಲ ದಾಖಲಾತಿ ಅಭಿಯಾನವಲ್ಲ; ಪ್ರತಿಯೊಂದು ಮಗುವಿನ ಶಿಕ್ಷಣದ ಹಕ್ಕು ಸಾಕಾರಗೊಳಿಸುವ ಸಾಮಾಜಿಕ ಹೊಣೆಗಾರಿಕೆ ಯಾಗಿದೆ. ಸಮುದಾಯದ ಸಹಕಾರದಿಂದ ಮಾತ್ರ ಟಯಾವ ಮಗು ಶಾಲೆಯಿಂದ ಹೊರಗುಳಿಯದ ಗುರಿ ಸಾಧಿಸಲು ಸಾಧ್ಯ.**
> **- ಕವಿತಾ ದಂಡಿನ**

ಗದಗ-ಬೆಟಗೇರಿ ನಗರಸಭೆ ಸದಸ್ಯ ಚಂದ್ರು ಕರಿಸೋಮನಗೌಡ್ರ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಶಿಸ್ತು, ಆತ್ಮವಿಶ್ವಾಸ ಹಾಗೂ ಉತ್ತಮ ನಾಗರಿಕ ಗುಣಗಳನ್ನು ಬೆಳೆಸುವ ವಾತಾವರಣವಿದ್ದು, ಪಾಲಕರು ಸರ್ಕಾರಿ ಶಾಲೆಗಳ ಮೇಲೆ ವಿಶ್ವಾಸವಿಟ್ಟು ಮಕ್ಕಳನ್ನು ದಾಖಲಿಸಬೇಕು ಎಂದು ಮನವಿ ಮಾಡಿದರು.

ಶಿಕ್ಷಣ ಸಂಯೋಜಕ ಮುರಳಿ ಸೋಲಾಪೂರ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಮಧ್ಯಾಹ್ನದ ಬಿಸಿಯೂಟ, ವಿದ್ಯಾರ್ಥಿವೇತನ ಸೇರಿದಂತೆ ಹಲವು ಸೌಲಭ್ಯಗಳು ಲಭ್ಯವಿದ್ದು, ಪಾಲಕರು ಅವುಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಹೇಳಿದರು.

ಮುಖ್ಯೋಪಾಧ್ಯಾಯಿನಿ ಗೀತಾ ದೇವಂಗಮಠ ಮಾತನಾಡಿ, ದಾಖಲಾತಿ ಆಂದೋಲನದಿಂದ ಮಕ್ಕಳ ಶಿಕ್ಷಣದ ಬಗ್ಗೆ ಪಾಲಕರಲ್ಲಿ ಹೆಚ್ಚಿನ ಜಾಗೃತಿ ಮೂಡುತ್ತಿದ್ದು, ಮಕ್ಕಳನ್ನು ನಿಯಮಿತವಾಗಿ ಶಾಲೆಗೆ ಕಳುಹಿಸುವ ಮನೋಭಾವವೂ ಹೆಚ್ಚುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಕಿ ಎಸ್.ವಿ. ಕೇಸರಿ, ಪೋಷಕರಾದ ರಾಘವೇಂದ್ರ ಕಬಾಡಿ, ಲಕ್ಷ್ಮಣಸಿಂಗ್ ಗಿಡ್ಡಿಮನಿ, ಶ್ರದ್ಧಾ ಕಬಾಡಿ, ಪಾರ್ವತಿಬಾಯಿ ರಜಪೂತ, ಮುನಿರಾಬೇಗಂ ಹವಾಲ್ದಾರ್, ಬಿ.ಬಿ. ಜಾನ್ ಈಟಿ, ರೇಣುಕಾಬಾಯಿ ಮರಿಯಾಳ, ಮಂಜುನಾಥ ಹಾದಿಮನಿ, ಕಾಶೀನಾಥ ಅರವಟಗಿ, ಮಂಜಣ್ಣ ದಿಂಡಿ, ರಾಜು ಕಬಾಡಿ, ಅಶೋಕ ಬಿರಾದಾರ, ಆಕಾಶ ಅರವಟಗಿ, ರಾಜು ಶಿಂಧೆ, ಗಗನ ಕಬಾಡಿ ಹಾಗೂ ಹೇಮಂತ ರಜಪೂತ ಸೇರಿದಂತೆ ಹಲವರು ಭಾಗವಹಿಸಿದ್ದರು.

### ಬೆಳೆ ಒಣಗುತ್ತಿದೆ ಎಂದು ಆಕ್ರೋಶ | ವಿಷದ ಬಾಟಲಿ ಹಿಡಿದು ಪ್ರತಿಭಟನೆ | ಅಧಿಕಾರಿಗಳ ವಿರುದ್ಧ ಗಂಭೀರ ಆರೋಪ!

# ವಿದ್ಯುತ್ ಇಲ್ಲದೆ ಕಂಗಾಲಾದ ರೈತರು: ಹೆಸ್ಕಾಂ ಕಚೇರಿಗೆ ಬೀಗ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**
ಸಮರ್ಪಕ ವಿದ್ಯುತ್ ಪೂರೈಕೆ ಇಲ್ಲದೆ ನೀರಾವರಿ ಬೆಳೆಗಳು ಒಣಗುತ್ತಿವೆ ಎಂದು ಆರೋಪಿಸಿ ಲಕ್ಷ್ಮೇಶ್ವರ ತಾಲೂಕಿನ ಹರದಗಟ್ಟಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರು ಗುರುವಾರ ಹೆಸ್ಕಾಂ ಕಚೇರಿಗೆ ಮುತ್ತಿಗೆ ಹಾಕಿ, ಸಿಬ್ಬಂದಿಯನ್ನು ಹೊರಗೆ ಕಳುಹಿಸಿ ಕಚೇರಿಗೆ ಬೀಗ ಜಡಿದು ತೀವ್ರ ಪ್ರತಿಭಟನೆ ನಡೆಸಿದರು. ಈ ವೇಳೆ ಅಧಿಕಾರಿಗಳೊಂದಿಗೆ ವಾಗ್ವಾದ ನಡೆಸಿದ ರೈತರು, ಸಂಬಂಧಪಟ್ಟ ಅಧಿಕಾರಿಗಳನ್ನು ಅಮಾನತುಗೊಳಿಸುವಂತೆ ಒತ್ತಾಯಿಸಿದರು.



ಮಳೆಯ ಕೊರತೆಯಿಂದ ಈಗಾಗಲೇ ಸಂಕಷ್ಟದಲ್ಲಿರುವ ರೈತರಿಗೆ ನೀರಾವರಿಯೇ ಆಸರೆಯಾಗಿದ್ದು, ಹಗಲಿನಲ್ಲಿ ಐದು ಗಂಟೆ ವಿದ್ಯುತ್ ನೀಡುವುದಾಗಿ ಹೇಳಿದರೂ ಮಧ್ಯದಲ್ಲೇ ಕೈಕೊಡುತ್ತಿದೆ.

ರಾತ್ರಿ ಎರಡು ಗಂಟೆಗೆ ವಿದ್ಯುತ್ ನೀಡುವುದಾಗಿ ಸಂದೇಶ ಕಳುಹಿಸಿದರೂ ಮಧ್ಯರಾತ್ರಿವರೆಗೂ ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಆದರೂ ವಿದ್ಯುತ್ ಪೂರೈಕೆಯಾಗುತ್ತಿಲ್ಲ ಎಂದು ರೈತರು ಆರೋಪಿಸಿದರು.

ಲೈನ್‌ಮೆನ್, ಸೆಕ್ಷನ್ ಅಧಿಕಾರಿಗಳು ಹಾಗೂ ಮೇಲಾಧಿಕಾರಿಗಳಿಗೆ ಕರೆ ಮಾಡಿದರೂ ಸ್ವೀಕರಿಸುವುದಿಲ್ಲ. ಕಚೇರಿ ದೂರವಾಣಿ ಸದಾ ಸ್ವಿಚ್‌ಆಫ್ ಆಗಿರುತ್ತದೆ. ಇಂತಹ ಪರಿಸ್ಥಿತಿಯಲ್ಲಿ ರೈತರು ತಮ್ಮ ಅಹವಾಲು ಯಾರಿಗೆ ಸಲ್ಲಿಸಬೇಕು ಎಂದು ಪ್ರಶ್ನಿಸಿದರು.

ಒಂದು ಟ್ರಾನ್ಸ್‌ಫಾರ್ಮರ್‌ಗೆ ನಿಗದಿತ ಸಂಖ್ಯೆಗಿಂತ ಹೆಚ್ಚು ವಿದ್ಯುತ್ ಸಂಪರ್ಕಗಳನ್ನು ನೀಡಿರುವುದರಿಂದ ಮೊದಲು ಮೋಟಾರ್ ಚಾಲನೆ ಮಾಡಿದವರಿಗೆ ಮಾತ್ರ ನೀರು ದೊರೆಯುತ್ತಿದ್ದು,

ಉಳಿದವರು ಚಾಲನೆ ಮಾಡಿದ ಕೂಡಲೇ ಟ್ರಿಪ್ ಆಗುತ್ತಿದೆ. ನಿಯಮ ಉಲ್ಲಂಘಿಸಿ ಹಣ ಪಡೆದು ಬೇಕಾಬಿಟ್ಟಿ ಸಂಪರ್ಕಗಳನ್ನು ನೀಡಲಾಗಿದೆ ಎಂದು ರೈತರು ಗಂಭೀರ ಆರೋಪ ಮಾಡಿದರು.

ಪ್ರತಿಭಟನೆ ವೇಳೆ ಸ್ಥಳಕ್ಕೆ ಆಗಮಿಸಿದ ಹೆಸ್ಕಾಂ ಎಇಇ ಆಂಜನೇಯಪ್ಪ ರೈತರನ್ನು ಸಮಾಧಾನಪಡಿಸಲು ಯತ್ನಿಸಿದರೂ, ರೈತರ ಆಕ್ರೋಶಕ್ಕೆ ಗುರಿಯಾದರು. ನೀರಿನ ಕೊರತೆಯಿಂದ ಮೆಕ್ಕೆಜೋಳ ಸೇರಿದಂತೆ ಬೆಳೆಗಳು ಒಣಗುತ್ತಿದ್ದು, ರೈತರ ನಷ್ಟಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ರೈತರು ಆಗ್ರಹಿಸಿದರು.

ಈ ವೇಳೆ ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣಗೌಡ ಬಣ) ಕಾರ್ಯಕರ್ತರು ಪ್ರತಿಭಟನೆಗೆ ಬೆಂಬಲ ಸೂಚಿಸಿ, ರೈತರ ಸಮಸ್ಯೆಗೆ ತಕ್ಷಣ ಸ್ಪಂದಿಸುವಂತೆ ಅಧಿಕಾರಿಗಳನ್ನು ಒತ್ತಾಯಿಸಿದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಹೊಗೆಸೊಪ್ಪಿನ, ಲೋಕೇಶ ಸುತಾರ ಸೇರಿದಂತೆ ಹಲವರು ಹಾಜರಿದ್ದರು.

ಪ್ರತಿಭಟನೆಯಲ್ಲಿ ಹರದಗಟ್ಟಿ, ಆಡರಕಟ್ಟಿ, ಮುನಿಯನ ತಾಂಡಾ, ಉಂಡೇನಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರಾದ ಇಮಾಮಹುಸೇನ ದೊಡ್ಡಮನಿ, ಸುರೇಶ ಮಾಳಗಿಮನಿ, ರಾಮಪ್ಪ ಲಮಾಣಿ, ನೂರಅಹ್ಮದ ದೊಡ್ಡಮನಿ, ರವಿ ಲಮಾಣಿ, ಮಹಮ್ಮದಸಾಬ್ ದೊಡ್ಡಮನಿ, ಶಿವಪ್ಪ ಲಮಾಣಿ, ಬಸವರಾಜ ಲಮಾಣಿ, ಕೃಷ್ಣಾ ಲಮಾಣಿ, ಸೋಮು ಉಮಚಗಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

> **ಈ ಬಾರಿ ಮಳೆ ಇಲ್ಲದೆ ಈಗಾಗಲೇ ಕಂಗಾಲಾಗಿದ್ದೇವೆ. ಉಳಿದಿರುವ ಸ್ವಲ್ಪ ಬೆಳೆಯನ್ನಾದರೂ ನೀರಾವರಿ ಮೂಲಕ ಉಳಿಸಿಕೊಳ್ಳಬೇಕೆಂದರೆ ಅದಕ್ಕೂ ಅವಕಾಶವಿಲ್ಲದಂತಾಗಿದೆ. ವಿದ್ಯುತ್ ಪೂರೈಕೆ ಮಾಡುವವರು ರೈತರನ್ನು ಸಂಪೂರ್ಣ ಕಡೆಗಣಿಸಿದ್ದಾರೆ. ಬೆಳೆಗಳು ಕಣ್ಣೆದುರೇ ಒಣಗುತ್ತಿವೆ. ನಾವೇ ರೈತರು ಬೆಳೆ ಬೆಳೆಯದಿದ್ದರೆ ನೀವೇನು ತಿನ್ನುತ್ತೀರಾ? ನಮಗೆ ಇಂತಹ ವಿದ್ಯುತ್ ಸಂಪರ್ಕವೇ ಬೇಡ, ಎಲ್ಲವನ್ನೂ ಕಿತ್ತುಕೊಂಡು ಹೋಗಿ.**
> **- ದೇವಪ್ಪ ಲಮಾಣಿ (ಮಾಳಗಿಮನಿ),**
> ರೈತ, ಹರದಗಟ್ಟಿ

ಪ್ರತಿಭಟನೆ ವೇಳೆ ಕೆಲ ರೈತರು ವಿಷದ ಬಾಟಲಿಗಳನ್ನು ಹಿಡಿದು ಬಂದಿದ್ದು, ಪರಿಸ್ಥಿತಿ ಗಂಭೀರವಾಗುವ ಮುನ್ನ ಪೊಲೀಸರು ಅವುಗಳನ್ನು ವಶಪಡಿಸಿಕೊಂಡರು.

### ಅಕ್ಕನ ಬಳಗದ ಮಾಸಿಕ ಸಭೆಯಲ್ಲಿ ಹಬ್ಬಗಳ ಮಹತ್ವದ ಕುರಿತು ಉಪನ್ಯಾಸದಲ್ಲಿ ಅಭಿಮತ

# ಸಂಸ್ಕೃತಿಯ ಸಂರಕ್ಷಣೆಯಲ್ಲಿ ಮಹಿಳೆಯರ ಪಾತ್ರ ಅನನ್ಯ



**ವಿಜಯಸಾಕ್ಷಿ ಸುದ್ದಿ, ಗದಗ**
ಹಬ್ಬಗಳು ಕೇವಲ ಧಾರ್ಮಿಕ ಆಚರಣೆಗಳಲ್ಲ, ಅವು ಕುಟುಂಬದ ಐಕ್ಯತೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಜೀವಂತ ಸೇತುವೆಗಳಾಗಿವೆ ಎಂದು ಗದಗ ಡಯಟ್‌ನ ಉಪನ್ಯಾಸಕ ವೈ.ಕೆ. ಹಂದ್ರಾಳ ಹೇಳಿದರು.

ಗದಗ ಅಕ್ಕನ ಬಳಗ ಆಯೋಜಿಸಿದ್ದ ಮಾಸಿಕ ಸಭೆಯಲ್ಲಿ ಟಮಹಿಳೆ ಮತ್ತು ಹಬ್ಬಗಳುಟ ವಿಷಯ ಕುರಿತು ಉಪನ್ಯಾಸ ನೀಡಿದ ಅವರು, ಭಾರತೀಯ ಮಹಿಳೆಯರು ಕುಟುಂಬದ ಜೊತೆಗೆ ಸಂಸ್ಕೃತಿ ಮತ್ತು ಪರಂಪರೆಯ ಸಂರಕ್ಷಣೆಯಲ್ಲೂ ಪ್ರಮುಖ ಪಾತ್ರವಹಿಸುತ್ತಿದ್ದಾರೆ.

ಹಬ್ಬಗಳ ಆಚರಣೆಯ ಮೂಲಕ ಮಕ್ಕಳಲ್ಲಿ ನೈತಿಕ ಮೌಲ್ಯಗಳು, ಸಂಸ್ಕಾರ ಹಾಗೂ ಸಾಮಾಜಿಕ ಜವಾಬ್ದಾರಿಯ ಅರಿವು ಮೂಡಿಸುತ್ತಿದ್ದಾರೆ ಎಂದು ಹೇಳಿದರು.

ಇಂದಿನ ದಿನಗಳಲ್ಲಿ ಮಹಿಳೆಯರು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿರುವುದರ ಜೊತೆಗೆ ಕುಟುಂಬದ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುತ್ತಾ ನಮ್ಮ ಸಂಸ್ಕೃತಿಯನ್ನು ಜೀವಂತವಾಗಿಡುವ ಕಾರ್ಯದಲ್ಲಿ ತೊಡಗಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ಶ್ರಾವಣಿ ಹೊಸಳ್ಳಿಮಠ ಹಾಗೂ ಪ್ರಜ್ಞಾ ನಾಲತ್ವಾಡಮಠ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಟನಾರಿ ಸಮ್ಮಾನಟ ಪ್ರಶಸ್ತಿ ಪುರಸ್ಕೃತ ಶ್ರೀಮತಿ ಸುವರ್ಣಾ ಮದರಿಮಠ ಅವರನ್ನು ಅಕ್ಕನ ಬಳಗದಿಂದ ಸನ್ಮಾನಿಸಲಾಯಿತು.

> **ಹಬ್ಬಗಳು ಸಂಸ್ಕೃತಿಯ ಜೀವನಾಡಿ. ಅವುಗಳ ಆಚರಣೆಯ ಮೂಲಕವೇ ಮಹಿಳೆಯರು ಕುಟುಂಬದಲ್ಲಿ ಸಂಸ್ಕಾರ, ಮೌಲ್ಯ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ದಾಟಿಸುತ್ತಿದ್ದಾರೆ.**
> **- ವೈ.ಕೆ. ಹಂದ್ರಾಳ**


ಅಧ್ಯಕ್ಷತೆ ವಹಿಸಿದ್ದ ಅಕ್ಕನ ಬಳಗದ ಅಧ್ಯಕ್ಷೆ ಜಯಶ್ರೀ ಹುಬ್ಬಳ್ಳಿ ಮಾತನಾಡಿ, ಮಹಿಳೆಯರು ಕುಟುಂಬದ ಬೆನ್ನೆಲು ಬಾಗಿರುವುದರ ಜೊತೆಗೆ ಸಂಸ್ಕೃತಿ ಮತ್ತು ಸಂಪ್ರದಾಯಗಳ ನಿಜವಾದ ರಾಯಭಾರಿಗಳಾಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಟ್ರಸ್ಟ್ ಅಧ್ಯಕ್ಷೆ ಕಸ್ತೂರಿ ಹಿರೇಗೌಡ್ರ, ಟ್ರಸ್ಟಿ ಸುವರ್ಣಾ ವಸ್ತ್ರದ, ಸುಜಾತಾ ಗುಡಿಮನಿ, ಕಾರ್ಯದರ್ಶಿ ಜಯಶ್ರೀ ಪಾಟೀಲ, ಖಜಾಂಚಿ ಶಿವಲೀಲಾ ಹಿರೇಮಠ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಲಲಿತಾ ಇಂಗಳಳ್ಳಿ ಪ್ರಾರ್ಥಿಸಿದರು. ದೀಪಾ ಪಟ್ಟಣಶೆಟ್ಟಿ ಪರಿಚಯಿಸಿದರು. ಜಯಾ ಬಳ್ಳಾರಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯದರ್ಶಿ ಜಯಶ್ರೀ ಪಾಟೀಲ ವಂದಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಇತ್ತೀಚೆಗೆ ನಿಧನರಾದ ಹಿರಿಯ ಗಾಯಕಿ ಎಸ್. ಜಾನಕಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

# ಬಂಜಾರ ಸಮುದಾಯದ ಮುಖಂಡ ಐ.ಎಸ್. ಪೂಜಾರ ಬಿಜೆಪಿ ಸೇರ್ಪಡೆ



**ವಿಜಯಸಾಕ್ಷಿ ಸುದ್ದಿ, ಗದಗ**
ಬಂಜಾರ ಸಮುದಾಯದ ಪ್ರಭಾವಿ ಯುವ ಮುಖಂಡ ಐ.ಎಸ್. ಪೂಜಾರ ಅವರು ಗುರುವಾರ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಸಮ್ಮುಖದಲ್ಲಿ ಭಾರತೀಯ ಜನತಾ ಪಕ್ಷಕ್ಕೆ ಅಧಿಕೃತವಾಗಿ ಸೇರ್ಪಡೆಯಾದರು.

ಪ್ರಧಾನಿ ನರೇಂದ್ರ ಮೋದಿ ಅವರ ಕಳೆದ 12 ವರ್ಷಗಳ ಆಡಳಿತ, ಅಭಿವೃದ್ಧಿ ಪರ ದೃಷ್ಟಿಕೋನ ಹಾಗೂ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಯುವ ನಾಯಕತ್ವದಿಂದ ಪ್ರೇರಿತರಾಗಿ ಪಕ್ಷ ಸೇರ್ಪಡೆಯಾಗಿರುವುದಾಗಿ ಐ.ಎಸ್. ಪೂಜಾರ ತಿಳಿಸಿದ್ದಾರೆ. ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿಯನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ತಮ್ಮ ಅಪಾರ ಬೆಂಬಲಿಗರು, ಸಮಾಜದ ಮುಖಂಡರು ಹಾಗೂ ಕ್ಷೇತ್ರದ ಪ್ರಮುಖ ನಾಯಕರೊಂದಿಗೆ ಪಕ್ಷ ಸೇರಿರುವುದಾಗಿ ಅವರು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಶರಣು ತಳ್ಳಿಕೇರಿ, ಶಿರಹಟ್ಟಿ ಬಂಜಾರ ಸಮಾಜದ ಅಧ್ಯಕ್ಷ ಶಿವಣ್ಣ ಲಮಾಣಿ, ಕಾರ್ಯದರ್ಶಿ ಪುಂಡಲೀಕ ಲಮಾಣಿ, ಬಿಜೆಪಿ ಮುಖಂಡರಾದ ಥಾವರೆಪ್ಪ ಲಮಾಣಿ ಹಾಗೂ ದೇವಿಹಾಳದ ರೆಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka